ಸಂಪುಟ : 10 ಸಂಚಿಕೆ: 287 ಪುಟ : 4+2 ಬೆಲೆ: 3.00 ಮಂಗಳವಾರ ಡಿಸೆಂಬರ್ 30 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 287 Pages : 4+2 Price : 3.00 Tuesday December 30 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ರಾಷ್ಟ್ರಕವಿ ಕುವೆಂಪು ಜನ್ಮದಿನಾಚರಣೆ ಅಂಗವಾಗಿ ಜಿಲ್ಲಾಡಳಿತದಲ್ಲಿ 'ವಿಶ್ವಮಾನವ ದಿನಾಚರಣೆ'

# ವಿಶ್ವಮಾನವ ತತ್ವವು ಇಂದಿನ ಸಮಾಜಕ್ಕೆ ದಾರಿದೀಪ





■ವಿಜಯಸಾಕ್ಷಿ ಸುದ್ದಿ, ಗದಗ

ಜಾತಿ-ಮತ-ಭಾಷೆಗಳ ಅಂತರವನ್ನು ಮೀರಿ ಮಾನವತೆಯೇ ಧರ್ಮ ಎಂಬ ಸಂದೇಶವನ್ನು ಕುವೆಂಪು ತಮ್ಮ ಸಾಹಿತ್ಯದ ಮೂಲಕ ಸಮಾಜಕ್ಕೆ ನೀಡಿದ್ದಾರೆ. ಯುವಜನತೆ ಕುವೆಂಪು ಅವರ ಚಿಂತನೆಗಳನ್ನು ಅರ್ಥಮಾಡಿಕೊಂಡು ಸಾಮಾಜಿಕ ಬದಲಾವಣೆಗೆ ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಕರೆ ನೀಡಿದರು.

ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನಾಚರಣೆಯ ಅಂಗವಾಗಿ ಜಿಲ್ಲಾಡಳಿತ, ಜಿ.ಪಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಸೋಮವಾರ ಗದಗ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ವಿಶ್ವಮಾನವ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆರಂಭದಲ್ಲಿ ರಾಷ್ಟ್ರಕವಿ ಕುವೆಂಪು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ಅರ್ಪಿಸಲಾಯಿತು. ಬಳಿಕ ನಡೆದ ಕಾರ್ಯಕ್ರಮದಲ್ಲಿ ಸಾಹಿತಿಗಳು ಹಾಗೂ ಶಿಕ್ಷಣ ತಜ್ಞರು ಕುವೆಂಪು ಅವರ ಸಾಹಿತ್ಯ, ದರ್ಶನ ಮತ್ತು ವಿಶ್ವಮಾನವ ತತ್ವದ ಪ್ರಸ್ತುತತೆಯ ಕುರಿತು ಮಾತನಾಡಿದರು.

ಹಿರಿಯ ಸಾಹಿತಿ ಚಂದ್ರಶೇಖರ ವಸ್ತ್ರದ ಉಪನ್ಯಾಸ ನಿಡುತ್ತಾ, ಭೂಮಿ ಮೇಲೆ ಹುಟ್ಟುವ ಪ್ರತಿ ಮಗು ವಿಶ್ವಮಾನವ. ಆ ನಂತರ ಆ ಮಗುವನ್ನು ಜಾತಿ, ಮತದ ಕಟ್ಟುಪಾಡುಗಳಿಂದ ಬಂಧಿಸಲಾಗುತ್ತದೆ. ಹಾಗಾಗಬಾರದು. ಯಾವುದೇ ವ್ಯಕ್ತಿ ಜಾತಿಯಿಂದ ಮುಖ್ಯನಾಗಬಾರದು, ನೈತಿಕ ವ್ಯಕ್ತಿತ್ವದಿಂದ ಮುಖ್ಯನಾಗಬೇಕು ಎಂಬ ಪರಿಕಲ್ಪನೆ ಕುವೆಂಪು ಅವರದಾಗಿತ್ತು. ಹಾಗಾಗಿ ಕುವೆಂಪು ಅವರ ಜಾತ್ಯಾತೀತ ಮನೋಭಾವದಿಂದ ಮೂಡಿ ಬಂದ ಆಶಯವೇ ವಿಶ್ವಮಾನವ ಸಂದೇಶವಾಗಿದೆ. ಬುದ್ಧ ಮತ್ತು ಬಸವಣ್ಣನವರಂತೆ ಪ್ರತಿಯೊಬ್ಬ ವ್ಯಕ್ತಿಯೂ ಸ್ವತಂತ್ರವಾಗಿ, ವೈಚಾರಿಕ ದೃಷ್ಟಿಕೋನವನ್ನು ಬೆಳೆಸಿಕೊಳ್ಳಬೇಕು ಎಂದು ಕುವೆಂಪು ಹೇಳಿದ್ದಾರೆ ಎಂದು ತಿಳಿಸಿದರು.

'ಮನುಜ ಮತ ವಿಶ್ವಪಥ' ಇದು ಕುವೆಂಪು ಅವರ ವಿಶ್ವಮಾನವ ಸಂದೇಶದ ತಿರುಳಾಗಿದೆ. ಅಂದರೆ, 'ಮನುಷ್ಯನ ಧರ್ಮವೇ ವಿಶ್ವದ ಪಥ' ಎಂದು ಸಾರುವ ಮೂಲಕ ಎಲ್ಲ ಮಾನವರೂ ಒಂದೇ ಎಂಬ ಭಾವನೆಯನ್ನು ಬೆಳೆಸುವುದಾಗಿದೆ ಎಂದು ಸಾಹಿತಿ ಚಂದ್ರಶೇಖರ ವಸ್ತ್ರದ ಹೇಳಿದರು.

ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡವಿಷಯದಲ್ಲಿ 125ಕ್ಕೆ 125 ಅಂಕ ಪಡೆದ 20 ಮಕ್ಕಳನ್ನು ಹಾಗೂ ತಲಾ 10 ಹಿರಿಯ ಹಾಗೂ ಯುವ ಸಾಹಿತಿ, ಕವಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ರಾಜ್ಯ ಜಾನಪದ ಅಕಾಡೆಮಿ ಸದಸ್ಯ ಶಂಕ್ರಣ್ಣ ಸಂಕಣ್ಣನವರ, ಶರೀಫ್ ಬಿಳೆಯಲಿ, ಡಾ. ರಾಜೇಂದ್ರ ಗಡಾದ, ಮುತ್ತು ಬಿಳೆಯಲಿ, ಶ್ರೀನಿವಾಸಮೂರ್ತಿ ಕುಲಕರ್ಣಿ, ಆರ್.ಎಸ್. ಬುರಡಿ, ಶ್ರೀಧರ ಚಿನಗುಡಿ ಇದ್ದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಹಾಗೂ ಕನ್ನಡ ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿದರು. ಪ್ರೊ. ಬಾಹುಬಲಿ ಜೈನರ್ ನಿರ್ವಹಿಸಿದರು.

> ಕುವೆಂಪು ಅವರು ಪ್ರತಿಪಾದಿಸಿದ ವಿಶ್ವಮಾನವ ತತ್ವವು ಇಂದಿನ ಸಮಾಜಕ್ಕೆ ದಾರಿದೀಪವಾಗಿದೆ. ಮಾನವೀಯತೆ, ಸಮಾನತೆ, ಸಹಾನುಭೂತಿ ಹಾಗೂ ಸೌಹಾರ್ದತೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಅಗತ್ಯವಿದೆ.
>
> – ಸಿ.ಎನ್. ಶ್ರೀಧರ.
> ಜಿಲ್ಲಾಧಿಕಾರಿಗಳು, ಗದಗ.

> ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ವಿಶ್ವಮಾನವನೆಂಬ ಧ್ಯೇಯವೇ ನಮ್ಮ ಬದುಕಿನ ದಾರಿಯಾಗಲಿ. ಎಲ್ಲರೂ ಸಮಾನರು, ಎಲ್ಲರಲ್ಲೂ ಮಾನವೀಯತೆಯೇ ಮೊದಲ ಧರ್ಮ. ಸತ್ಯ, ಪ್ರೀತಿ ಮತ್ತು ಸಹಾನುಭೂತಿಗಳಿಂದಲೇ ನಿಜವಾದ ಸಮಾಜ ನಿರ್ಮಾಣ ಸಾಧ್ಯ ಎಂದರು.

## ಕ್ಯಾಲೆಂಡರ್ ಬಿಡುಗಡೆ ಸಮಾರಂಭ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಚಕ್ರವರ್ತಿ ದಿನಪತ್ರಿಕೆಯ 2026ರ ಸಾಲಿನ ವರ್ಣರಂಜಿತ ಕ್ಯಾಲೆಂಡರ್ ಬಿಡುಗಡೆ ಸಮಾರಂಭವನ್ನು ಡಿ. 30ರಂದು ಬೆಳಿಗ್ಗೆ 9.30ಕ್ಕೆ ಇಲ್ಲಿನ ಪತ್ರಿಕಾ ಭವನದಲ್ಲಿ ಆಯೋಜಿಸಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಓಂಕಾರೇಶ್ವರ ಹಿರೇಮಠದ ಶ್ರೀ ಷ.ಬ್ರ. ಫಕೀರೇಶ್ವರ ಶಿವಾಚಾರ್ಯ ಸ್ವಾಮಿಗಳು ವಹಿಸಲಿದ್ದಾರೆ. ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಉದ್ಘಾಟಿಸಲಿದ್ದು, ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆಯನ್ನು ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ ಮಾಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಹಿರಿಯ ಪತ್ರಕರ್ತರಾದ ಡಾ. ಅನಂತ ಕಾರ್ಕಳ, ಜಗದೀಶ ಕುಲಕರ್ಣಿ, ಹೆಚ್.ಎಂ. ಶರೀಫನವರ, ಅಜಿತ್ ಹೊಂಬಾಳಿ ಮುಂತಾದವರು ಪಾಲ್ಗೊಳ್ಳಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಎಬಿಬಿಎಸ್‌ಕೆ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಈಶ್ವರಸಾ ಮೇರವಾಡೆ, ಬೆಟಗೇರಿ ಎಸ್.ಎಸ್.ಕೆ ಪಂಚ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಲೋಕನಾಥ ಕಬಾಡಿ, ಗದಗ ಎಸ್.ಎಸ್.ಕೆ ಪಂಚ ಕಮಿಟಿಯ ಅಧ್ಯಕ್ಷ ಫಕೀರಸಾ ಭಾಂಡಗೆ ಆಗಮಿಸಲಿದ್ದಾರೆ.

ಗದಗ ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ರಾಜು ಹೆಬ್ಬಳ್ಳಿ, ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾಧ್ಯಕ್ಷ ಜಗದೀಶ್ ಪೂಜಾರ ಉಪಸ್ಥಿತರಿರುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪತ್ರಿಕೆಯ ಸಂಪಾದಕರಾದ ಎನ್.ಆರ್. ಭಾಂಡಗೆ ವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

### ಕಾಂಗ್ರೆಸ್ ಪಕ್ಷದ 141ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಅಕ್ಷಯ ಪಾಟೀಲ ಅಭಿಮತ

# ಸ್ವಾತಂತ್ರ್ಯಕ್ಕಾಗಿ ಸ್ಥಾಪಿತವಾದ ಪಕ್ಷ ಕಾಂಗ್ರೆಸ್

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಾಂಗ್ರೆಸ್ ಎಂದು ಕರೆಯಲ್ಪಡುವ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಭಾರತದಲ್ಲಿ ದೊಡ್ಡ ರಾಜಕೀಯ ಪಕ್ಷವಾಗಿದೆ. ರಾಷ್ಟ್ರವಾದಿ ಮತ್ತು ಸ್ವಾತಂತ್ರ ಎಂಬ ತತ್ವದಲ್ಲಿ ಸ್ಥಾಪಿತವಾದ ಪಕ್ಷವಾಗಿದ್ದು, ಏಷ್ಯಾ ಮತ್ತು ಆಫ್ರಿಕಾದ ಆಗಿನ ಬ್ರಿಟಿಷ್ ಸಾಮ್ರಾಜ್ಯದಲ್ಲಿ ಹೊರಹೊಮ್ಮಿದ ಮೊದಲ ಆಧುನಿಕ ಪಕ್ಷವಾಗಿದೆ. ಸಮಬಾಳು, ಸಹಜೀವನ, ಜೊತೆಗೆ ಸ್ವಾತಂತ್ರಕ್ಕಾಗಿ ಸ್ಥಾಪಿತವಾದ ಪ್ರಮುಖ ಸಂಘಟನೆಯಾಗಿದೆ ಎಂದು ಯುವ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಅಕ್ಷಯ ಪಾಟೀಲ ಹೇಳಿದರು.

ಸಮೀಪದ ಅಬ್ಬಿಗೇರಿಯ ಗಾಂಧಿ ವೃತ್ತದಲ್ಲಿ ಅಬ್ಬಿಗೇರಿ ಕಾಂಗ್ರೆಸ್ ಕಮಿಟಿ ಆಶ್ರಯದಲ್ಲಿ, ಕಾಂಗ್ರೆಸ್ ಪಕ್ಷದ 141ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.




ಕಾಂಗ್ರೆಸ್ ಪಕ್ಷ ಭಾರತೀಯ ಸ್ವಾತಂತ್ರ್ಯ ಚಳವಳಿಯಲ್ಲಿ ಪ್ರಮುಖ ಪಾತ್ರ ವಹಿಸಿದೆ. ಭಾರತವನ್ನು ಸ್ವಾತಂತ್ರ್ಯಗೊಳಿಸುವಲ್ಲಿ ಪಾತ್ರ ವಹಿಸಿದ ಪ್ರಮುಖ ಪಕ್ಷಗಳಲ್ಲಿ ಕಾಂಗ್ರೆಸ್ ಒಂದಾಗಿದೆ. ಬ್ರಿಟಿಷ್ ಸಾಮ್ರಾಜ್ಯದಲ್ಲಿನ ಇತರ ವಸಾಹತುಶಾಹಿ ವಿರೋಧಿ ರಾಷ್ಟ್ರೀಯತಾವಾದಿ ಚಳುವಳಿಗಳ ಮೇಲೆ ಕಾಂಗ್ರೆಸ್ ಪ್ರಭಾವ ಬೀರಿದೆ ಎಂದರು. ರೋಣ ತಾಲೂಕು ವಾಲ್ಮೀಕಿ ಸಮಾಜದ ಅಧ್ಯಕ್ಷ ಬಸವರಾಜ ತಳವಾರ ಮಾತನಾಡಿ, ಬ್ರಿಟಿಷ್ ಆಳ್ವಿಕೆ ನಂತರ, ಆಡಳಿತದಲ್ಲಿ ಭಾರತೀಯರು ಹೆಚ್ಚಿನ ಭಾಗವಹಿಸುವಿಕೆಯ ಉದ್ದೇಶವನ್ನು ಇಟ್ಟುಕೊಂಡು ರಾಷ್ಟ್ರೀಯತಾವಾದಿ ಚಳುವಳಿಗಾಗಿ ರಚಿಸಲಾದ ಪ್ರಮುಖ ಸಂಘಟನೆಯೇ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್. ದೇಶವನ್ನು ಸ್ವತಂತ್ರಗೊಳಿಸುವುದು, ದೇಶಕ್ಕೆ ಹೊಸ ಸಂವಿಧಾನ ರಚಿಸುವುದು, ರಾಮರಾಜ್ಯ ಸ್ಥಾಪನೆ, ಸರ್ವೋದಯ ಪರಿಕಲ್ಪನೆ ಮೂಲಕ ಸ್ಥಾಪಿತವಾದ ಒಂದು ಸಂಘಟನೆಯಾಗಿದೆ. ಕ್ರಮೇಣ ಇದು ರಾಜಕೀಯ ಪಕ್ಷವಾಯಿತು. ಏಷ್ಯಾ ಮತ್ತು ಆಫ್ರಿಕಾ ಖಂಡಗಳ ಸುಮಾರು 60 ದೇಶಗಳ ಸ್ವಾತಂತ್ರ್ಯ ಹೋರಾಟಕ್ಕೆ ಈ ರಾಷ್ಟ್ರೀಯ ಕಾಂಗ್ರೆಸ್ ಪ್ರೇರಣೆ ನೀಡಿತು ಎಂದರು.

> ಪಕ್ಷಕ್ಕೆ ಸೇವೆ ಸಲ್ಲಿಸಿದ ಹಿರಿಯರಾದ ಬುದ್ಧಿವಂತಪ್ಪ ಉಪಾಧ್ಯ, ಭೀಮಣ್ಣ ಬಂಡಿಹಾಳ, ಮಲ್ಲೇಶಪ್ಪ ಗದುಗಿನ, ಮಲ್ಲಪ್ಪ ಕಲ್ಲೇಶ್ಯಾಣಿ, ಎಚ್.ಟಿ. ದ್ವಾಸಲ, ಸುರೇಶ ಬಸವರಡ್ಡೇರ, ಹನುಮಪ್ಪ ನಡುವಲಗುಡ್ಡ, ಹೂವಪ್ಪ ಪೂಜಾರ, ಅಂದಪ್ಪ ದ್ವಾಸಲ ಅವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಬಾಬುಗೌಡ ಪಾಟೀಲ, ಬಸವರಾಜ ಪಲ್ಲೇದ, ಸುರೇಶ ಬಸವರಡ್ಡೇರ, ಎಚ್.ಟಿ. ದ್ವಾಸಲ, ಬಾಬು ಬನ್ನಿಕೊಪ್ಪ, ಎಂ.ಡಿ. ಬಸವರಡ್ಡೇರ, ರಾಮನಗೌಡ ಹಲಕುರ್ಕಿ, ಜಗದೀಶ ಅವರಡ್ಡಿ, ಭೀಮರಡ್ಡಿ ಅವರಡ್ಡಿ, ಗುರಣ್ಣ ಅವರಡ್ಡಿ, ಎಂ.ಡಿ. ಬಸವರಡ್ಡೇರ, ಸುರೇಶ ಶಿರೋಳ, ಮಲ್ಲು ಯಲ್ಲರಡ್ಡಿ, ಅಂದಪ್ಪ ಹಲಕುರ್ಕಿ, ಸಿದ್ದು ಹನುಮನಾಳ, ಮುತ್ತು ಕುಕನೂರ, ಶಿವಣ್ಣ ಗುಗ್ಗರಿ, ಮಹಾಂತೇಶ ತಳವಾರ, ಮಹಾಂತೇಶ ಇಮ್ರಾಪೂರ, ಭೀಮಣ್ಣ ಕಂಬಳಿ, ಅಂದಪ್ಪ ತಾಳಿಕೋಟಿ, ಟಿ.ಬಿ. ಇಮ್ರಾಪೂರ, ಬಸವರಾಜ ಕಮ್ಮಾರ, ತಿರುಮಲೇಶ ಬಂಡಿವಡ್ಡರ, ರಾಮಣ್ಣ ಕುಲಕರ್ಣಿ, ಸಂತೋಷ ಕಲ್ಲೆಶ್ಯಾಣಿ, ಕುಮಾರ ಬಸವರಡ್ಡೇರ, ಸೋಮು ಶಿರೋಳ, ಶಿವಪುತ್ರ ಕೆಂಗಾರ, ಶೇಕಣ್ಣ ಕಮ್ಮಾರ, ಗುರುಲಿಂಗಪ್ಪ ಬಸವರಡ್ಡೇರ, ಶರಣು ವಡವಿ, ಸೋಮು ವಡವಿ, ಅಶೋಕ ಶಿರೋಳ, ಮನೋಹರ ಬಳಗಾನೂರ, ಮಂಜು ಚಿತ್ತರಗಿ, ಚನ್ನಬಸು ಹೂಗಾರ, ಲಕ್ಷ್ಮಣ ಹಿರೇಮನಿ, ಶಶಿ ಸಂಗನಾಳ, ಶಶಿ ಹಿರೇಮನಿ, ಶಂಕರ ದ್ವಾಸಲ, ಮಳ್ಳಪ್ಪ ದ್ವಾಸಲ, ರಮೇಶ ಕುಡಗುಂಟಿ ಮುಂತಾದವರು ಉಪಸ್ಥಿತರಿದ್ದರು.

### 'ಮನ್ ಕಿ ಬಾತ್' ವೀಕ್ಷಣೆ ಕಾರ್ಯಕ್ರಮದಲ್ಲಿ ಸಂಸದ ಬಸವರಾಜ ಬೊಮ್ಮಾಯಿ

# ಪ್ರಧಾನಿ ದೇಶದ ಜನರನ್ನು ಒಗ್ಗೂಡಿಸುತ್ತಿದ್ದಾರೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಮಾನ್ಯ ಜನರ ಅಸಮಾನ್ಯ ಕೆಲಸಗಳನ್ನು ದೇಶದ ಜನರಿಗೆ ಮನ್ ಕಿ ಬಾತ್ ಕಾರ್ಯಕ್ರಮದ ಮೂಲಕ ತಿಳಿಸಿ ಜನರೊಡಗೂಡಿ ಜನರಿಂದಲೇ ಸಮೃದ್ಧ ದೇಶವನ್ನು ಕಟ್ಟುವ ಕೆಲಸವನ್ನು ಪ್ರಧಾನಿ ನರೇಂದ್ರ ಮೋದಿಯವರು ಮಾಡುತ್ತಿದ್ದಾರೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ತಾಲೂಕಿನ ಸೂರಣಗಿ ಗ್ರಾಮದಲ್ಲಿ ಭಾರತೀಯ ಜನತಾ ಪಕ್ಷದ ಜಿಲ್ಲಾ ರೈತ ಮೋರ್ಚಾದ ವತಿಯಿಂದ ಏರ್ಪಡಿಸಿದ್ದ ಪ್ರಧಾನ ಮಂತ್ರಿಗಳ ಮನ್ ಕಿ ಬಾತ್ ವೀಕ್ಷಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

> ಬೆಳೆ ಪರಿಹಾರ ನೀಡುವಲ್ಲಿ ಮಧ್ಯವರ್ತಿಗಳು ಗೋಲ್‌ಮಾಲ್ ಮಾಡಿದ್ದಾರೆ. ಅದರ ಬಗ್ಗೆ ತನಿಖೆ ಮಾಡಲು ಹೇಳಿದ್ದೇನೆ. ನಾನು ಮುಖ್ಯಮಂತಿ ಇದ್ದಾಗ ಕೇಂದ್ರ ಸರ್ಕಾರ ನೀಡುವ ಪರಿಹಾರದ ಎರಡು ಪಟ್ಟು ಪರಿಹಾರ ನೀಡಿದ್ದೆ. ಒಣ ಬೇಸಾಯಕ್ಕೆ ನಾನು 12500 ರೂ. ಕೊಟ್ಟಿದ್ದೆ. ನೀರಾವರಿಗೆ 25 ಸಾವಿರ, ತೋಟಗಾರಿಕೆಗೆ 28 ಸಾವಿರ ರೂ ಪರಿಹಾರ ನೀಡಿದ್ದೆ. ರೈತರ ಪರ ಸರ್ಕಾರ ಇದ್ದರೆ ಪರಿಹಾರ ಸಿಗುತ್ತದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಪ್ರಧಾನಿ ನರೇಂದ್ರ ಮೋದಿಯವರು ಜನರ ಜೊತೆಗೆ ನೇರ ಸಂಪರ್ಕ ಇಟ್ಟುಕೊಂಡು ಇಡೀ ದೇಶದಲ್ಲಿ ಆಗುತ್ತಿರುವ ಒಳ್ಳೆಯ ಕೆಲಸಗಳ ಬಗ್ಗೆ ದೇಶಕ್ಕೆ ತಿಳಿಸಿ ಅವುಗಳಿಂದ ಪ್ರೇರಣೆ ಪಡೆಯಲು ಈ ಕಾರ್ಯಕ್ರಮ ನಡೆಸುತ್ತಿದ್ದಾರೆ. ದೇಶದ ಯಾವುದೇ ಮೂಲೆಯಲ್ಲಿ ಸಾಮಾನ್ಯರು ಮಾಡಿರುವ ಅಸಮಾನ್ಯ ಸಾಧನೆಗಳನ್ನು ಹೇಳುತ್ತಾರೆ. ದುಬೈನಲ್ಲಿ ಕನ್ನಡ ಶಾಲೆ ತೆರೆದಿರುವುದು, ಮಣಿಪುರದಲ್ಲಿ ಸೋಲಾರ್ ಬಳಕೆ ಮೂಲಕ ವಿದ್ಯುತ್ ಸಂಪರ್ಕ ▶▶3ನೇ ಪುಟಕ್ಕೆ

### ಸುದ್ದಿಗೋಷ್ಠಿಯಲ್ಲಿ ಶಾಸಕ ಸಿ.ಸಿ. ಪಾಟೀಲ ಆರೋಪ

# ಬೆಳಗಾವಿ ಅಧಿವೇಶನ ಸಂಪೂರ್ಣ ವ್ಯರ್ಥವಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಚಳಿಗಾಲದ ಅಧಿವೇಶನದಲ್ಲಿ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಹೊಸ ಸದಸ್ಯರಿಗೆ ಹಾಗೂ ಉತ್ತರ ಕರ್ನಾಟಕದ ಚರ್ಚೆಗೆ ಹೆಚ್ಚಿನ ಅವಕಾಶ ನೀಡಿದರು. ಸಿದ್ದರಾಮಯ್ಯ ಎಲ್ಲರ ಅಭಿಪ್ರಾಯಗಳನ್ನು ಆಲಿಸಿದರು. ಈ ಭಾಗದ ಅಭಿವೃದ್ಧಿಗೆ ಆದ್ಯತೆ ನೀಡುತ್ತಾರೆ ಎಂಬ ಭರವಸೆಯಿತ್ತು. ಆದರೆ, ಸಿಎಂ ತಮ್ಮ ಸುದೀರ್ಘ ಉತ್ತರದಲ್ಲಿ ಮುಕ್ಕಾಲು ಭಾಗ ಕೇಂದ್ರ ಸರಕಾರವನ್ನು ಟೀಕಿಸುವುದಕ್ಕೆ ಸಮಯ ಕಳೆದರು. ಬೆಳಗಾವಿಯಲ್ಲಿ ನಡೆದ ಅಧಿವೇಶನ ಉತ್ತರ ಕರ್ನಾಟಕದ ಅಭಿವೃದ್ಧಿಯ ದೃಷ್ಟಿಯಿಂದ ಸಂಪೂರ್ಣ ವ್ಯರ್ಥವಾಗಿದೆ ಎಂದು ನರಗುಂದ ಶಾಸಕ ಸಿ.ಸಿ. ಪಾಟೀಲ ಆರೋಪಿಸಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸದಸ್ಯರ ಬೇಡಿಕೆಗಳಿಗೆ ಸ್ಪಂದಿಸಲಿಲ್ಲ, ನಯಾ ಪೈಸೆ ಅನುದಾನ ಘೋಷಿಸಲಿಲ್ಲ. ಕೋಟ್ಯಂತರ ರೂಪಾಯಿ ಖರ್ಚು ಮಾಡಿ ನಡೆಸಿದ ಈ ಅಧಿವೇಶನದಿಂದ ಜನಸಾಮಾನ್ಯರಿಗೆ ಯಾವುದೇ ಪ್ರಯೋಜನವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.



ಬೆಂಗಳೂರಿನ ಕೋಗಿಲು ಬಡಾವಣೆಯಲ್ಲಿ ಸುಮಾರು 500 ಕೋಟಿ ರೂ. ಮೌಲ್ಯದ ಅತಿಕ್ರಮಿತ ಜಾಗವನ್ನು ಸರಕಾರ ವಶಪಡಿಸಿಕೊಂಡಿರುವುದು ಸ್ವಾಗತಾರ್ಹ. ಆದರೆ ಕೇರಳ ಸಿಎಂ ಪಿಣರಾಯಿ ವಿಜಯನ್ ಅವರು ಈ ಕಾರ್ಯಾಚರಣೆಯನ್ನು ಉತ್ತರ ಪ್ರದೇಶ ಮಾದರಿಯ 'ಬುಲ್ಡೋಜರ್ ಸರ್ಕಾರ' ಎಂದು ಟೀಕಿಸಿರುವುದು ಸರಿಯಲ್ಲ. ದೇಶದ್ರೋಹಿಗಳ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳುವ ಉತ್ತರ ಪ್ರದೇಶದ ಕ್ರಮಕ್ಕೂ, ಇಲ್ಲಿನ ಅತಿಕ್ರಮಣ ತೆರವಿಗೂ ಹೋಲಿಕೆ ಮಾಡುವುದು ಸರಿಯಲ್ಲ ಎಂದರು. ಕೇವಲ 400 ಜನರ ಓಲೈಕೆಗಾಗಿ ರಾಜ್ಯದ 6 ಕೋಟಿ ಜನರ ಹಿತಾಸಕ್ತಿಯನ್ನು ಬಲಿ ಕೊಡಲಾಗುತ್ತಿದೆ. ರಾಜ್ಯ ಸರ್ಕಾರವನ್ನು ನಡೆಸುತ್ತಿರುವುದು ಸಿದ್ದರಾಮಯ್ಯ ಅವರೊ ಅಥವಾ ವೇಣುಗೋಪಾಲ್ ಮತ್ತು ಪಿಣರಾಯಿ ವಿಜಯನ್ ಅವರೊ ಎನ್ನುವುದು ಸ್ಪಷ್ಟವಾಗಲಿ. ರಾಜ್ಯದ ಆಡಳಿತದಲ್ಲಿ ಕೆ.ಸಿ. ವೇಣುಗೋಪಾಲ್ ಅವರ ಹಸ್ತಕ್ಷೇಪ ಹೆಚ್ಚಾಗಿದೆ ಎಂದು ಆರೋಪಿಸಿದ ಅವರು, ವೇಣುಗೋಪಾಲ್ ಈಗ ಕರ್ನಾಟಕದ 'ಸೂಪರ್ ಸಿಎಂ' ಆಗಿದ್ದಾರೆ. ಈ ಸರ್ಕಾರದಲ್ಲಿ ಆಡಳಿತವೂ ಇಲ್ಲ, ಜನಪರ ಕಾಳಜಿಯೂ ಇಲ್ಲ. ದಿನಬೆಳಗಾದರೆ ಸಿಎಂ ಕುರ್ಚಿ ಉಳಿಸಿಕೊಳ್ಳುವ ಚರ್ಚೆಯೇ ನಡೆಯುತ್ತಿದೆ ಎಂದು ಆಪಾದಿಸಿದರು. ಸರ್ಕಾರ ಮಂಡಿಸಿರುವ ದ್ವೇಷ ಭಾಷಣ ತಡೆ ಮಸೂದೆ ಇಂದಿರಾ ಗಾಂಧಿಯವರ ತುರ್ತು ಪರಿಸ್ಥಿತಿಯ ಕೂಸು. ಪ್ರಧಾನಿಯವರ ವಿರುದ್ಧ ಅಸಭ್ಯ ಪದ ಬಳಸುವ ಸಿಎಂ ಸಿದ್ದರಾಮಯ್ಯ ಅವರು, ಸಂವಿಧಾನದ ಪುಸ್ತಕ ಹಿಡಿದು ಸಂವಿಧಾನ ವಿರೋಧಿ ಮಸೂದೆ ತರುತ್ತಿದ್ದಾರೆ. ಇದು ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಹತ್ತಿಕ್ಕುವ ದ್ವೇಷದ ರಾಜಕಾರಣ ಎಂದು ಕಿಡಿಕಾರಿದರು.

ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಪ್ರಧಾನ ಕಾರ್ಯದರ್ಶಿ ಲಿಂಗರಾಜಗೌಡ ಪಾಟೀಲ, ಮುಖಂಡರಾದ ಎಂ.ಎಸ್. ಕರಿಗೌಡ್ರ, ಸಿದ್ದಪ್ಪ ಪಲ್ಲೇದ, ವಿಜಯಲಕ್ಷ್ಮೀ ಮಾನ್ವಿ, ರಾಘವೇಂದ್ರ ಯಳವತ್ತಿ, ಅನಿಲ ಅಬ್ಬಿಗೇರಿ, ಪ್ರಶಾಂತ ನಾಯ್ಕರ್ ಮುಂತಾದವರು ಉಪಸ್ಥಿತರಿದ್ದರು.

> ರಾಜ್ಯದಲ್ಲಿ ಡ್ರಗ್ ಮಾಫಿಯಾ ನೋಡಿದರೆ ಗಾಬರಿ ಮೂಡಿಸುತ್ತದೆ. ಮಹಾರಾಷ್ಟ್ರ ಪೊಲೀಸರು ಇಲ್ಲಿಗೆ ಬಂದು ಎರಡು ಬಾರಿ ಡ್ರಗ್ ಮಾಫಿಯಾ ಪತ್ತೆ ಮಾಡುತ್ತಾರೆ ಎಂದರೆ, ನಮ್ಮ ಪೊಲೀಸರು ಮತ್ತು ಗುಪ್ತಚರ ವಿಭಾಗವನ್ನು ಯಾರೋ ಕಟ್ಟಿ ಹಾಕಿದ್ದಾರೆ ಎನ್ನುವ ಅನುಮಾನ ಮೂಡುತ್ತದೆ. ಡ್ರಗ್ ಪೆಡ್ಲರ್ ಮತ್ತು ಕೋಟ್ಯಾಂತರ ರೂ. ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿರುವ ಬಗ್ಗೆ ಗೃಹ ಸಚಿವರು ಸದನದಲ್ಲಿ ಉತ್ತರ ನೀಡಿದ್ದಾರೆ. ಆದರೆ ಡ್ರಗ್ ತಯಾರಕರನ್ನು ಹಿಡಿಯುತ್ತಿಲ್ಲ. ನಮ್ಮ ಪೊಲೀಸರ ಕೈ ಕಟ್ಟಿ ಹಾಕಿದವರು ಯಾರು ಎಂದು ಶಾಸಕ ಸಿ.ಸಿ. ಪಾಟೀಲ ಪ್ರಶ್ನಿಸಿದರು.

## ವಿ.ಎಚ್.ಪಿ ವಿಭಾಗ ಪ್ರಮುಖರಾಗಿ ಶ್ರೀಧರ್ ಕುಲಕರ್ಣಿ ಆಯ್ಕೆ





■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಹಿಂದೂ ಪರಿಷತ್ತಿನ ಜಿಲ್ಲಾಧ್ಯಕ್ಷರಾಗಿ ಜವಾಬ್ದಾರಿ ನಿಭಾಯಿಸಿದ ಶ್ರೀಧರ್ ಕುಲಕರ್ಣಿ ಅವರಿಗೆ ವಿಭಾಗ ಪ್ರಮುಖ ಹಾಗೂ ಪ್ರಾಂತ ಜವಾಬ್ದಾರಿಯನ್ನು ವಿಶ್ವ ಹಿಂದೂ ಪರಿಷತ್ ಕರ್ನಾಟಕ ಉತ್ತರ ಪ್ರಾಂತ ಬೈಠಕ್‌ನಲ್ಲಿ ಘೋಷಣೆ ಮಾಡಲಾಗಿದೆ. ಇದುವರೆಗೆ ಜಿಲ್ಲಾ ವಿಶ್ವ ಹಿಂದೂ ಪರಿಷತ್ತಿನ ಕಾರ್ಯದರ್ಶಿ ಎಂದು ಕಾರ್ಯನಿರ್ವಹಿಸುತ್ತಿದ್ದ ಗದುಗಿನ ಮಾರುತಿ ಪವಾರರನ್ನು ವಿಶ್ವ ಹಿಂದೂ ಪರಿಷತ್ ಜಿಲ್ಲಾ ಅಧ್ಯಕ್ಷ ಎಂದು ಬಾಗಲಕೋಟೆಯಲ್ಲಿ ಇತ್ತೀಚೆಗೆ ನಡೆದ ವಿಶ್ವ ಹಿಂದೂ ಪರಿಷತ್ ಪ್ರಾಂತ ಬೈಠಕ್‌ನಲ್ಲಿ ಘೋಷಣೆ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಜಯಶ್ರೀ ಹಿರೇಮಠರಿಗೆ 'ಉತ್ತಮ ಶಿಕ್ಷಕಿ' ಪ್ರಶಸ್ತಿ





■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಮಗೇರಿ ಗ್ರಾಮದ ಜಿ.ಎಫ್. ಉಪನಾಳ ಸರ್ಕಾರಿ ಪ್ರೌಢಶಾಲೆಯಲ್ಲಿ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸುತ್ತಿರುವ ಜಯಶ್ರೀ ಹಿರೇಮಠ ಧಾರವಾಡದ ಚೇತನ ಫೌಂಡೇಶನ್ ಕೊಡಮಾಡುವ ಉತ್ತಮ ಶಿಕ್ಷಕಿ ಪುರಸ್ಕಾರಕ್ಕೆ ಭಾಜನರಾಗಿದ್ದಾರೆ.

ಧಾರವಾಡದ ಚಂದ್ರಶೇಖರ ಮಾಡಲಗೇರಿ ನೇತೃತ್ವದ ಚೇತನ ಫೌಂಡೇಶನ್ ಕರ್ನಾಟಕ ವಿಶ್ವವಿದ್ಯಾಲಯದ ಕನಕ ವಿದ್ಯಾಪೀಠದಲ್ಲಿ ಭಾನುವಾರ ನಡೆದ ನುಡಿ ಸಡಗರ ಕಾರ್ಯಕ್ರಮದಲ್ಲಿ ಶಿಕ್ಷಣ ಕ್ಷೇತ್ರದ ವಿಶೇಷ ಸೇವೆ ಪರಿಗಣಿಸಿ ರಾಮಗೇರಿ ಗ್ರಾಮದ ಜಿ.ಎಫ್. ಉಪನಾಳ ಸರ್ಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕಿ ಜಯಶ್ರೀ ಹಿರೇಮಠ, ಲಕ್ಷ್ಮೇಶ್ವರದ ಸರ್ಕಾರಿ ಪ್ರಾ.ಶಾಲೆಯಲ್ಲಿ ಸೇವೆ ಸಲ್ಲಿಸಿ ಇತ್ತೀಚೆಗೆ ನಿವೃತ್ತರಾದ ಶಿಕ್ಷಕ ಬಸವರಾಜ ದನದಮನಿ ಅವರಿಗೆ ಉತ್ತಮ ಶಿಕ್ಷಕ ಪುರಸ್ಕಾರ ನೀಡಿ ಗೌರವಿಸಲಾಯಿತು.

### ಎನ್.ಎಸ್.ಎಸ್ ವಾರ್ಷಿಕ ವಿಶೇಷ ಶಿಬಿರ ಉದ್ಘಾಟಿಸಿದ ಮಂಜುನಾಥ ಬ್ಯಾಹಟ್ಟಿ ಅಭಿಮತ

# ವ್ಯಕ್ತಿತ್ವ ವಿಕಸನಕ್ಕೆ ಎನ್.ಎಸ್.ಎಸ್ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧೀಜಿ ಅವರ ಗ್ರಾಮ ಸ್ವರಾಜ್ಯದ ಕನಸಿನ ಆಶಯದಂತೆ ಭಾರತ ಸರ್ಕಾರವು 1969ರ ಸೆಪ್ಟೆಂಬರ್ 24ರಂದು ಆರಂಭಿಸಿರುವ ರಾಷ್ಟ್ರೀಯ ಸೇವಾ ಯೋಜನಾ ಘಟಕವು ಯುವಕರು ಸ್ವ-ಇಚ್ಛೆಯಿಂದ ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಲು ಅತ್ಯುತ್ತಮ ವೇದಿಕೆಯಾಗಿದೆ ಎಂದು ಹೊಸಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷ ಮಂಜುನಾಥ ಬ್ಯಾಹಟ್ಟಿ ಹೇಳಿದರು.

ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಎನ್.ಎಸ್.ಎಸ್ ಘಟಕವು ಹೊಸಹಳ್ಳಿ ಗ್ರಾಮದಲ್ಲಿ ಆಯೋಜಿಸಿರುವ 2025-26ನೇ ಸಾಲಿನ ವಾರ್ಷಿಕ ವಿಶೇಷ ಶಿಬಿರವನ್ನು ಉದ್ಘಾಟಿಸಿ ಮಾತನಾಡಿ, ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸುವ ಯುವಕರು ಭವಿಷ್ಯತ್ತಿನಲ್ಲಿ ಸಮಾಜಮುಖಿ ನಾಯಕರಾಗಲು ಸಾಧ್ಯವೆಂದು ಹೇಳಿದರು. ಮುಖ್ಯ ಅತಿಥಿಗಳಾದ ಕುರ್ತಕೋಟಿ ಗ್ರಾಮ ಪಂಚಾಯಿತಿ ಸದಸ್ಯ ಚನ್ನಪ್ಪ ಬ್ಯಾಹಟ್ಟಿ ಮಾತನಾಡಿ, ಎನ್.ಎಸ್.ಎಸ್. ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸುವ ವಿದ್ಯಾರ್ಥಿಗಳು ಶಿಸ್ತು, ಸಮಯ ಪಾಲನೆ, ಸಹಬಾಳ್ವೆ, ಹೊಂದಾಣಿಕೆ, ಆತ್ಮವಿಶ್ವಾಸ, ರಾಷ್ಟ್ರಭಕ್ತಿ, ಸರಳ ಜೀವನ ಮುಂತಾದ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಸಾಧ್ಯವಾಗುವುದೆಂದು ಹೇಳಿದರು.



ಹೊಸಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಡಿ.ಎಸ್. ತಳವಾರ ಮಾತನಾಡಿ, ಸ್ವಯಂ ಸೇವಕರು ನಮ್ಮ ಶಾಲೆಯಲ್ಲಿ ವಾಸ್ತವ್ಯ ಮಾಡಿ ಗ್ರಾಮದಲ್ಲಿ ಜಾಗೃತಿ ಕಾರ್ಯಕ್ರಮಗಳ ಮೂಲಕ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿರುವುದು ಸಂತೋಷವಾಗಿದ್ದು, ಮಹಾ ತಪಸ್ವಿಗಳ ಭೂಮಿಯಲ್ಲಿ ಕೈಗೊಳ್ಳುತ್ತಿರುವ ತಮ್ಮ ಸೇವಾ ಕಾರ್ಯಗಳು ಸದಾಕಾಲ ಗ್ರಾಮಸ್ಥರಲ್ಲಿ ನೆನಪಿನಲ್ಲಿರುವಂತೆ ಕಾರ್ಯನಿರ್ವಹಿಸಿರೆಂದು ಹಾರೈಸಿದರು.

ಎನ್.ಎಸ್.ಎಸ್ ಘಟಕದ ಕಾರ್ಯಕ್ರಮ ಅಧಿಕಾರಿ ಮತ್ತು ಶಿಬಿರಾಧಿಕಾರಿ ಪ್ರೊ. ಅಪ್ಪಣ್ಣ ಹಂಜೆ ಪ್ರಾಸ್ತಾವಿಕವಾಗಿ ಮಾತನಾಡುತ್ತ, 7 ದಿನಗಳವರೆಗೆ ಶಿಬಿರದ ಮೂಲಕ ಕೈಗೊಳ್ಳುವ ಚಟುವಟಿಕೆಗಳನ್ನು ತಿಳಿಸುತ್ತ 'ನನಗಲ್ಲ, ನಿನಗೆ' ಧ್ಯೇಯವಾಕ್ಯದೊಂದಿಗೆ ಆಗಮಿಸಿರುವ ನಾವು ಗ್ರಾಮದ ಪ್ರತಿಯೊಬ್ಬರ ಸಹಾಯ-ಸಹಕಾರವನ್ನೂ ಅಪೇಕ್ಷಿಸುತ್ತೇವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರೊ. ಸುಧಾ ಕೌಜಗೇರಿ ಮಾತನಾಡಿ, ಸ್ವಯಂ ಸೇವಕರು ನಿಷ್ಠೆ, ಶ್ರದ್ಧೆ, ಪ್ರಾಮಾಣಿಕವಾಗಿ ಗ್ರಾಮದಲ್ಲಿ ಸಮಾಜಮುಖಿ ಕಾರ್ಯಗಳನ್ನು ಕೈಗೊಂಡು ಗ್ರಾಮಸ್ಥರ ಮೆಚ್ಚುಗೆಯೊಂದಿಗೆ ಕಾಲೇಜಿಗೆ ಕೀರ್ತಿ ತರಬೇಕೆಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಸಹ ಶಿಬಿರಾಧಿಕಾರಿಗಳಾದ ವಿಜಯಕುಮಾರ, ಮಹಾಂತೇಶ, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ಲಕ್ಷ್ಮಣ ಮುಳಗುಂದ, ಐಕ್ಯುಎಸಿ ಸಹಸಂಚಾಲಕ ಡಾ. ಮಂಜುನಾಥ ತ್ಯಾಲಗಡಿ ಸ್ವಯಂ ಸೇವಕರಿಗೆ ಶುಭ ಹಾರೈಸಿದರು.

ಸ್ವಯಂ ಸೇವಕಿ ಜ್ಯೋತಿ ಈರಗಾರ ಪ್ರಾರ್ಥನೆಯೊಂದಿಗೆ ಆರಂಭವಾದ ಕಾರ್ಯಕ್ರಮವನ್ನು ಸಹಶಿಬಿರಾಧಿಕಾರಿ ಭೀಮೇಶ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ 50 ಸ್ವಯಂ ಸೇವಕರು, ಗ್ರಾಮದ ಹಿರಿಯರು, ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಶಿಕ್ಷಕಿಯರ ಬೀಳ್ಕೊಡುಗೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸರ್ಕಾರಿ ಪ್ರೌಢಶಾಲೆ ಸಿದ್ಧಲಿಂಗ ನಗರದಲ್ಲಿ ಸುದೀರ್ಘವಾಗಿ ಸೇವೆ ಸಲ್ಲಿಸಿದ ಗುರುಮಾತೆಯರಿಗೆ ಡಿ. 30ರಂದು ಬೀಳ್ಕೊಡುಗೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಎಸ್.ಡಿ.ಎಂ.ಸಿ ಅಧ್ಯಕ್ಷರಾದ ನಂದಾ ಕಟವಟೆ ಹಾಗೂ ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿ ತಿಳಿಸಿದ್ದಾರೆ.

ಅಂದು ಮಧ್ಯಾಹ್ನ 3 ಗಂಟೆಗೆ ಶಾಲಾ ಸಭಾಂಗಣದಲ್ಲಿ ಆಯೋಜಿಸಿರುವ ಬೀಳ್ಕೊಡುವ ಕಾರ್ಯಕ್ರಮದಲ್ಲಿ ಮಂಜುಳಾ ಸಾಮ್ರಾಣಿ, ಸಬೀಯಾ ಕುಷ್ಟಗಿ ಅವರನ್ನು ಹೃತ್ಪೂರ್ವಕವಾಗಿ ಗೌರವಿಸಿ ಬೀಳ್ಕೊಡಲಾಗುವುದು. ಮಂಜುಳಾ ಅವರು 20 ವರ್ಷಗಳಿಂದ ಹಾಗೂ ಕುಷ್ಟಗಿ ಗುರುಮಾತೆಯರು 5 ವರ್ಷಗಳಿಂದ ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿ ಸಾರ್ಥಕ ಸೇವೆ ಸಲ್ಲಿಸಿದ್ದಾರೆ.





ಈ ಹೃದಯಸ್ಪರ್ಶಿ ಬೀಳ್ಕೊಡುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಾ.ಶಿ. ಇಲಾಖೆಯ ಉಪನಿರ್ದೇಶಕರಾದ ಆರ್.ಎಸ್. ಬುರುಡಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಲಾ ದತ್ತು ಉಸ್ತುವಾರಿಗಳಾದ ಡಾ. ಬಸವರಾಜ ಧಾರವಾಡ, ನಗರಸಭೆ ಸದಸ್ಯರಾದ ವಿದ್ಯಾವತಿ ಗಡಗಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ರವೀಂದ್ರ ಶೆಟ್ಟಪ್ಪನವರ, ಗದಗ ತಾಲೂಕಾ ಅಕ್ಷರ ದಾಸೋಹ ಅಧಿಕಾರಿಗಳಾದ ಶಂಕರ್ ಹಡಗಲಿ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಬಿ.ಎಫ್. ಪೂಜಾರ್, ಗದಗ ತಾಲೂಕಾ ಸಹ ಶಿಕ್ಷಕರ ಸಂಘದ ಅಧ್ಯಕ್ಷರಾದ ಶರಣಪ್ಪ ನಾರಹಳ್ಳಿ ಮುಂತಾದವರು ಭಾಗವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಅವ್ವ ಸೇವಾ ಟ್ರಸ್ಟ್‌ನವರು ಕೊಡಮಾಡಿದ 2026ನೇ ಸಾಲಿನ ದಿನದರ್ಶಿಕೆಯನ್ನು ಬಿಡುಗಡೆ ಮಾಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗದಗ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆ

## ನೋಂದಣಿಗೆ ಡಿ. 30 ಕಡೆಯ ದಿನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಕರ್ನಾಟಕ ರಾಜ್ಯ ಸರಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು 2026ರ ಜ. 3 ಮತ್ತು 4ರಂದು ಗದಗ ಜಿಲ್ಲಾ ಆಡಳಿತ, ಗದಗ ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಸರ್ಕಾರಿ ನೌಕರರ ಸಂಘ ಜಿಲ್ಲಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಸಂಘಟಿಸಲಾಗುವುದು.

ಕ್ರೀಡಾಕೂಟದಲ್ಲಿ ಭಾಗವಹಿಸುವ ಸರ್ಕಾರಿ ನೌಕರರು ಡಿಸೆಂಬರ್ 30ರೊಳಗಾಗಿ https://forms.gle/bcvygT9P5oYxfRVx6* ಈ ಲಿಂಕ್ ಮುಖಾಂತರ ನೋಂದಣಿ ಮಾಡಿಕೊಳ್ಳಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ತಿಳಿಸಿದ್ದಾರೆ.

ಆನ್‌ಲೈನ್ ಮೂಲಕವೇ ನೋಂದಣಿ ಮಾಡಿಕೊಳ್ಳಬೇಕಿದ್ದು, ಆಫ್‌ಲೈನ್‌ಗೆ ಅವಕಾಶವಿಲ್ಲ. ನೋಂದಣಿ ಮಾಡಲು ಕೊನೆಯ ದಿನಾಂಕ 30-12-2025. ಕಡ್ಡಾಯವಾಗಿ ಇಂಗ್ಲೀಷ್ ವರ್ಣಮಾಲೆಯ ಅಕ್ಷರಗಳಲ್ಲಿ ಭರ್ತಿ ಮಾಡಬೇಕು. ಒಬ್ಬ ನೌಕರ 1-ಟ್ರ್ಯಾಕ್ ಮತ್ತು 2-ಫೀಲ್ಡ್ ಅಥವಾ 2-ಟ್ರ್ಯಾಕ್ ಮತ್ತು 1- ಫೀಲ್ಡ್ ಸೇರಿ ಒಟ್ಟು 3 ಆಟಗಳಲ್ಲಿ ಮಾತ್ರ ಭಾಗವಹಿಸಬಹುದು. ಕ್ರೀಡಾಪಟುಗಳು ಜ.3ರ ಬೆಳಿಗ್ಗೆ 8 ಗಂಟೆಗೆ ಹಾಜರಿದ್ದು ಕ್ರೀಡಾ ಸಂಘಟನಾಧಿಕಾರಿಗಳಲ್ಲಿ ಸೇವಾ ಪ್ರಮಾಣಪತ್ರ, ಇಲಾಖಾ ಗುರುತಿನ ಚೀಟಿ ಹಾಗೂ ಆಧಾರ್ ಕಾರ್ಡ್ ಹಾಜರುಪಡಿಸಿ ವರದಿ ಮಾಡಿಕೊಳ್ಳತಕ್ಕದ್ದು. ಜಿಲ್ಲಾ ಮಟ್ಟದಲ್ಲಿ ಗುಂಪು ಆಟಗಳಿಗೆ ಪ್ರತಿ ತಾಲೂಕಿನಿಂದ ಒಂದು ತಂಡಕ್ಕೆ ಮಾತ್ರ ಆಟವಾಡಲು ಅವಕಾಶವಿರುತ್ತದೆ. ಕೆಜಿಐಡಿ ನಂಬರ್ ಹೊಂದಿರುವ ಕನಿಷ್ಟ ಆರು ತಿಂಗಳು ಸೇವಾ ಅವಧಿ ಹೊಂದಿರುವ ಖಾಯಂ ನೌಕರರು ಮಾತ್ರ ಅರ್ಹರು. ಒಬ್ಬ ಸರಕಾರಿ ನೌಕರರು ಯಾವುದಾದರೂ ಒಂದು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ಕ್ರೀಡಾ ಕೋಟಾದಲ್ಲಿ ಆಯ್ಕೆಯಾದ ನೌಕರರು ಭಾಗವಹಿಸುವಂತಿಲ್ಲ. ಪೊಲೀಸ್ (ಸಮವಸ್ತ್ರಧಾರಿಗಳಿಗೆ) ಹಾಗೂ ಕ್ರೀಡಾ ಮೀಸಲಾತಿಯಡಿ ಆಯ್ಕೆಯಾದ ಎಲ್ಲ ನೌಕರರು ಭಾಗವಹಿಸಲು ಅರ್ಹರಿರುವುದಿಲ್ಲ.

ಅರಣ್ಯ ಇಲಾಖೆ ಮತ್ತು ಅಗ್ನಿ ಶಾಮಕ ಇಲಾಖೆಗಳ ಬ್ಯಾಡ್ಜ್ ನಂಬರ್ ಸಿಬ್ಬಂದಿಗಳು ಹಾಗೂ ಲಿಪಿಕ್ ಸಿಬ್ಬಂದಿಗಳು ಸಹ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಭಾಗವಹಿಸಬಹುದು. ದೈಹಿಕ ಶಿಕ್ಷಕರು ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಭಾಗವಹಿಸಬಹುದು. ನಿರ್ಣಾಯಕರು ಮತ್ತು ನ್ಯಾಯ ನಿರ್ಣಯ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ. ಈ ಫಾರಂನ್ನು ಭರ್ತಿ ಮಾಡಲು ಏನಾದರೂ ತೊಂದರೆಯಾದಲ್ಲಿ ನಾಗರಾಜ ಹಳ್ಳಿಕೇರಿ, ಅಧ್ಯಕ್ಷರು, ಕರ್ನಾಟಕ ರಾಜ್ಯ ನೌಕರರ ಸಂಘ, ತಾಲೂಕು ಶಾಖೆ-ಮುಂಡರಗಿ ಇವರ ಮೊ.ಸಂ-9901135850 ಹಾಗೂ ಐ.ಎ. ಗಾಡಗೋಳಿ, ಕ್ರೀಡಾ ಕಾರ್ಯದರ್ಶಿ -7411701127 ಇವರನ್ನು ಸಂಪರ್ಕಿಸಬಹುದಾಗಿದೆ.

## ಅರಾವಳಿ ಬೆಟ್ಟ, ಶ್ರೇಣಿಗಳ ಮರು ವ್ಯಾಖ್ಯಾನಕ್ಕೆ ಸುಪ್ರೀಂ ಕೋರ್ಟ್ ತಡೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಅರಾವಳಿ ಬೆಟ್ಟ ಮತ್ತು ಶ್ರೇಣಿಗಳ ಹೊಸ ವ್ಯಾಖ್ಯಾನ ಕುರಿತು ನವೆಂಬರ್ 20ರಂದು ನಿವೃತ್ತ ಸಿಜೆಐ ಬಿ. ಆರ್ ಗವಾಯಿ ನೇತೃತ್ವದ ಪೀಠ ನೀಡಿದ ತೀರ್ಪಿನ ಅನುಷ್ಠಾನವನ್ನು ಮೂವರು ನ್ಯಾಯಾಧೀಶರ ಸುಪ್ರೀಂ ಕೋರ್ಟ್‌ನ ವಿಶೇಷ ರಜಾಕಾಲದ ಪೀಠವು ಸೋಮವಾರ (ಡಿ.29) ತಡೆಹಿಡಿದಿದೆ.

ಕೇಂದ್ರ ಸರ್ಕಾರದ ನೇಮಿಸಿದ ಸಮಿತಿಯ ಶಿಫಾರಸುಗಳು ಮತ್ತು ಸುಪ್ರೀಂ ಕೋರ್ಟ್‌ನ ಹೇಳಿಕೆಗಳಿಗೆ ತಡೆ ನೀಡಿದ ಮುಖ್ಯ




ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ಪೀಠ ಜನವರಿ 21, 2026ಕ್ಕೆ ಮುಂದಿನ ವಿಚಾರಣೆಯನ್ನು ನಿಗದಿಪಡಿಸಿದೆ.

ಅರಾವಳಿ ಬೆಟ್ಟಗಳ ಶ್ರೇಣಿ ಕುರಿತು ಕೇಂದ್ರ ಸರ್ಕಾರದ ಸಮಿತಿ ನೀಡಿದ ಹೊಸ ವ್ಯಾಖ್ಯಾನವನ್ನು ಸುಪ್ರೀಂ ಕೋರ್ಟ್ ಒಪ್ಪಿಕೊಂಡಿರುವುದಕ್ಕೆ ದೇಶದಾದ್ಯಂತ ಸಾರ್ವಜನಿಕ ವಲಯದಲ್ಲಿ ತೀವ್ರ ವಿರೋಧ ವ್ಯಕ್ತವಾಗಿದ ಬಳಿಕ, ಈ ಕುರಿತು ಶನಿವಾರ ಸುಪ್ರೀಂ ಕೋರ್ಟ್ ಸ್ವಯಂ ಪ್ರೇರಿತ ಪ್ರಕರಣ ಕೈಗೆತ್ತಿಕೊಂಡಿತ್ತು. ಸೋಮವಾರ ವಿಚಾರಣೆ ನಡೆಸಿ ಮಧ್ಯಂತರ ಆದೇಶ ನೀಡಿದೆ.

ಅರಾವಳಿ ಶ್ರೇಣಿಯ ಗುರುತಿಸುವಿಕೆ ಮತ್ತು ರಕ್ಷಣೆ-ಯ ಸುತ್ತಲಿನ ವಿವಾದಾತ್ಮಕ ವಿಷಯವನ್ನು ಮರುಪರಿಶೀಲಿಸಲು ಬಯಸುವುದಾಗಿ ಹೇಳಿದ ಸುಪ್ರೀಂ ಕೋರ್ಟ್, ಅರಾವಳಿಗಳ ಎತ್ತರ, ವ್ಯಾಪ್ತಿ ಮತ್ತು ಪರಿಸರ ಮಹತ್ವಕ್ಕೆ ಸಂಬಂಧಿಸಿದ ಪ್ರಶ್ನೆಗಳನ್ನು ಸಮಗ್ರವಾಗಿ ಮರುಪರಿಶೀಲಿಸಲು ಡೊಮೇನ್ ತಜ್ಞರನ್ನು ಒಳಗೊಂಡಂತೆ ಉನ್ನತ-ಶಕ್ತಿಯ ತಜ್ಞರ ಸಮಿತಿಯನ್ನು ರಚಿಸುವ ಪ್ರಸ್ತಾಪವನ್ನು ಮುಂದಿಟ್ಟಿದೆ.

ಕೇಂದ್ರ ಸರ್ಕಾರ, ಸಂಬಂಧಪಟ್ಟ ರಾಜ್ಯಗಳು ಮತ್ತು ಅಮಿಕಸ್ ಕ್ಯೂರಿಗಳಿಗೆ ನೋಟಿಸ್ ಜಾರಿ ಮಾಡುವಾಗ, ಕಳೆದ ತಿಂಗಳು ಅನುಮೋದಿಸಲಾದ ನಿರ್ಬಂಧಿತ ಗಡಿರೇಖೆಯು ಗಣಿಗಾರಿಕೆಯಂತಹ ಚಟುವಟಿಕೆಗಳಿಗೆ ಅನುಮತಿ ನೀಡಬಹುದಾದ ಪ್ರದೇಶಗಳ ವ್ಯಾಪ್ತಿಯನ್ನು ವಿಸ್ತರಿಸುತ್ತದೆಯೇ ಎಂದು ಪರಿಶೀಲಿಸುವ ಅವಶ್ಯಕತೆಯಿದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

## ವಲಸೆ ಕಾರ್ಮಿಕನ ಮೇಲೆ ನಾಲ್ವರು ಅಪ್ರಾಪ್ತ ಗಾಂಜಾ ವ್ಯಸನಿಗಳಿಂದ ಹಲ್ಲೆ; ಡಿಎಂಕೆಯನ್ನು ಟೀಕಿಸಿದ ಬಿಜೆಪಿ

■ವಿಜಯಸಾಕ್ಷಿ ಸುದ್ದಿ, ತಮಿಳುನಾಡು

ತಮಿಳುನಾಡಿನ ತಿರುವಲ್ಲೂರು ಜಿಲ್ಲೆಯಲ್ಲಿ ವಲಸೆ ಕಾರ್ಮಿಕನ ಮೇಲೆ ನಾಲ್ವರು ಅಪ್ರಾಪ್ತ ವಯಸ್ಕರು ಹಲ್ಲೆ ನಡೆಸಿದ್ದು, ವಲಸೆ ಕಾರ್ಮಿಕ ತೀವ್ರವಾಗಿ ಗಾಯಗೊಂಡಿದ್ದಾರೆ.

ಈ ಘಟನೆಯನ್ನು ಅಪ್ರಾಪ್ತ ವಯಸ್ಕರು ಮೊಬೈಲ್ ಕ್ಯಾಮೆರಾದಲ್ಲಿ ಸೆರೆಹಿಡಿದಿದ್ದು, ಈ ಆಘಾತಕಾರಿ ವಿಡಿಯೋ ಆನ್‌ಲೈನ್‌ನಲ್ಲಿ ವೈರಲ್ ಆಗಿದೆ. ಈ ಘಟನೆಗಾಗಿ ಭಾರತೀಯ ಜನತಾ ಪಕ್ಷ (ಬಿಜೆಪಿ) ರಾಜ್ಯದ ಆಡಳಿತಾರೂಢ ಡಿಎಂಕೆ ಸರ್ಕಾರವನ್ನು ಗುರಿಯಾಗಿಸಿಕೊಂಡು ದಾಳಿ ಮಾಡಿದೆ.

## ರಾಷ್ಟ್ರಕವಿ ಕುವೆಂಪುರವರ ಜನ್ಮ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸರ್ಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಸೋಮವಾರ ರಾಷ್ಟ್ರಕವಿ ಕುವೆಂಪುರವರ ಜನ್ಮ ದಿನಾಚರಣೆ ನಿಮಿತ್ತ ವಿಶ್ವಮಾನವ ದಿನವನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯೋಪಾಧ್ಯಾಯ ಬಿ.ಎಂ. ಕುಂಬಾರ ಮಾತನಾಡಿ, ಹುಟ್ಟುವ ಯಾವುದೇ ವ್ಯಕ್ತಿ ಜಾತಿಯಿಂದ ಮುಖ್ಯನಾಗಬಾರದು. ಪ್ರತಿ ಮಗುವು ವಿಶ್ವಮಾನವನೇ. ಆನಂತರ ಮಗುವನ್ನು ಜಾತಿ-ಮತದ ಕಟ್ಟುಪಾಡುಗಳಿಂದ ಬಂಧಿಸಲಾಗುತ್ತದೆ, ಹಾಗಾಗಬಾರದು. ಯಾವುದೇ ವ್ಯಕ್ತಿ ಜಾತಿಯಿಂದ ಮುಖ್ಯನಾಗಬಾರದು. ನೈತಿಕ ವ್ಯಕ್ತಿತ್ವದಿಂದ ಮುಖ್ಯನಾಗಬೇಕು ಎಂಬ ಪರಿಕಲ್ಪನೆ ಕುವೆಂಪು ಅವರದಾಗಿತ್ತು. ಹಾಗಾಗಿ ಕುವೆಂಪು ಅವರ ಜಾತ್ಯತೀತ ಮನೋಭಾವದಿಂದ ಮೂಡಿ ಬಂದ ಆಶಯವೇ ವಿಶ್ವಮಾನವ ಎಂದು ಹೇಳಿದರು.

ಶಿಕ್ಷಕರಾದ ಎಚ್.ಡಿ. ನಿಂಗರೆಡ್ಡಿ, ಆರ್.ಕೆ. ಉಪನಾಳ, ಆರ್.ಎಂ. ಶಿರಹಟ್ಟಿ, ಎಲ್.ಎ. ಬಣಕಾರ, ನೇತ್ರಾವತಿ ಕುಂಬಾರ ಹಾಗೂ ಎನ್‌ಟಿಸಿ ಪ್ರಶಿಕ್ಷಣಾರ್ಥಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿಗೆ ಉತ್ಕರ್ಷಾ ಪಾಟೀಲ ಅಧಿಕೃತ ಭೇಟಿ

# ಸೇವೆಯಿಂದ ಸಾರ್ಥಕ ಬದುಕು ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಇನ್ನರ್ ವ್ಹೀಲ್ ಕ್ಲಬ್‌ನ ಮೂಲ ಧ್ಯೇಯವಾದ ಸ್ನೇಹ ಮತ್ತು ಸೇವೆಯನ್ನು ಸಾರ್ಥಕವಾಗಿ ನಿಭಾಯಿಸುತ್ತಿರುವ ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿ ಉತ್ತಮ ಮಾದರಿಯಾಗಿದೆ. ಎಲ್ಲಿ ಯಾವಾಗ ಅವಶ್ಯಕತೆ ಇದೆಯೋ, ಅಲ್ಲಿ ಉಪಸ್ಥಿತವಿರುವ ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿಯ ಸಮಯ ಪ್ರಜ್ಞೆ ಪ್ರಶಂಸನೀಯವಾದದ್ದು ಎಂದು ಇನ್ನರ್ ವ್ಹೀಲ್ ಕ್ಲಬ್ ಡಿಸ್ಟ್ರಿಕ್ 317ನ ಡಿಸ್ಟ್ರಿಕ್ ಚೇರಮನ್ ಉತ್ಕರ್ಷಾ ಪಾಟೀಲ್ ಪ್ರಶಂಸೆ ವ್ಯಕ್ತಪಡಿಸಿದರು. ರೋಟರಿ ಕ್ಲಬ್ ಗದಗ-ಬೆಟಗೇರಿಯಲ್ಲಿ ನಡೆದ ಇನ್ನರ್ ವ್ಹೀಲ್ ಕ್ಲಬ್‌ನ ಅಧಿಕೃತ ಭೇಟಿಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸ್ವರ್ಣ ಸಂಭ್ರಮವನ್ನು ಆಚರಿಸಿಕೊಂಡ ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿಯ ಕಾರ್ಯಗಳು ಹಾಗೂ ಅವರ ಪರಿಶ್ರಮ ಶ್ಲಾಘನೀಯವಾದದ್ದು ಎಂದರಲ್ಲದೆ, 2025-26ನೇ ಸಾಲಿನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ದಾಖಲೆಗಳನ್ನು ಪರಿಶೀಲಿಸಿ ಅವರ ನಿಷ್ಠೆ ಹಾಗೂ ಸಮರ್ಪಣಾ ಭಾವವನ್ನು ಮೆಚ್ಚಿ ಭವಿಷ್ಯದಲ್ಲಿ ಕೈಗೊಳ್ಳಬೇಕಾದ ಚಟುವಟಿಕೆಗಳು ಹಾಗೂ ಯೋಜನೆಗಳ ಬಗ್ಗೆ ಸಂಕ್ಷಿಪ್ತ ಮಾಹಿತಿಯನ್ನು ನೀಡಿದರು.




ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ಡಿ.ಸಿ ಉತ್ಕರ್ಷಾ ಪಾಟೀಲ ಮಂಜು ಶಿಕ್ಷಣ ಸಂಸ್ಥೆ ಬೆಟಗೇರಿ-ಗದಗನ ಮಂದ ಬುದ್ಧಿ ಮಕ್ಕಳ ವಸತಿ ವಿಶೇಷ ಶಾಲೆಯಲ್ಲಿ ವಾರ್ಷಿಕ ಕ್ರೀಡೆಗಳನ್ನು ಉದ್ಘಾಟಿಸಿ ದೇಣಿಗೆಯನ್ನು ನೀಡಿದರು. ಈ ಸಂದರ್ಭದಲ್ಲಿ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯ ನಿಟ್ಟಿನಲ್ಲಿ ಬಾಲಕಿಗೆ ಸೈಕಲ್‌ನ್ನು ಕ್ಲಬ್ ವತಿಯಿಂದ ವಿತರಿಸಲಾಯಿತು.

ಕ್ಲಬ್‌ನ ಅಧ್ಯಕ್ಷರಾದ ಅಶ್ವಿನಿ ಜಗತಾಪ ಸ್ವಾಗತಿಸಿದರು. ಪವಿತ್ರಾ ಬಿರಾದರ್ ಇನ್ನರ್ ವ್ಹೀಲ್ ಪ್ರಾರ್ಥನೆಯನ್ನು ಮಾಡಿದರು, ದೀಪಾ ಪಟ್ಟಣಶೆಟ್ಟಿ ಡಿ.ಸಿ ಉತ್ಕರ್ಷಾ ಪಾಟೀಲ್ ಅವರ ಪರಿಚಯವನ್ನು ನೀಡಿದರು. ರೂಪಾ ಸಂಶೀಮಠ ಪಿ.ಡಿ.ಸಿ. ಪ್ರೇಮಾ ಗುಳಗೌಡರ್ ಇವರ ಪರಿಚಯವನ್ನು ಹಾಗೂ ಹೊಸ ಸದಸ್ಯರಾಗಿ ಸೇರಿಕೊಂಡ ಗೀತಾ ನಾಲ್ವಾಡ ಇವರ ಪರಿಚಯವನ್ನು ಸುವರ್ಣಾ ಮದ್ರಿಮಠ ಮಾಡಿದರು.

ಕಾರ್ಯದರ್ಶಿಗಳಾದ ಶಿವಲೀಲಾ ಅಕ್ಕಿ ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿಯಿಂದ ಇಲ್ಲಿಯವರೆಗೆ ಕೈಗೊಂಡ 2025-26ನೇ ಸಾಲಿನ ಪ್ರೊಜೆಕ್ಟ್‌ಗಳ ವಿವರವನ್ನು ನೀಡಿದರು. ಸಂಪಾದಕರಾದ ವೀಣಾ ಕಾವೇರಿ ಕಾರ್ಯಕ್ರಮದಲ್ಲಿ ಬಿಡುಗಡೆಯಾದ 2025-26ನೇ ಸಾಲಿನ ಬುಲೆಟಿನ್ ಬುಕ್ ಬಗ್ಗೆ ವಿವರಣೆಯನ್ನು ನೀಡಿದರು. ಮಾಜಿ ಅಧ್ಯಕ್ಷರಾದ ನೀಲಾಂಬಿಕಾ ಉಗಲಾಟ್ ಹಾಗೂ ಕೊ-ಸಿ.ಪಿ.ಸಿ.ಸಿ. ಶಿಲ್ಪಾ ಅಕ್ಕಿ ಕಾರ್ಯಕ್ರಮವನ್ನು ನಿರೂಪಿಸಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿಯ ರೋಟರಿ, ರೋಟ್ರ್ಯಾಕ್ಸ್, ರೋಟರಿ ಸೆಂಟ್ರಲ್ ಹಾಗೂ ಇನ್ನರ್ ವ್ಹೀಲ್ ಕ್ಲಬ್ ಮಿಡ್‌ಟೌನ್‌ನ ಸದಸ್ಯರು ಹಾಗೂ ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿಯ ಸದಸ್ಯರು ಉಪಸ್ಥಿತರಿದ್ದರು.

# ತಾಲೂಕಾ ಪತ್ರಕರ್ತರ ಸಂಘಕ್ಕೆ ಅವಿರೋಧ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ರೋಣ

ಕಾರ್ಯನಿರತ ಪತ್ರಕರ್ತರ ಸಂಘದ ರೋಣ ತಾಲೂಕು ಘಟಕಕ್ಕೆ ರವಿವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಮೆಹಬೂಬ ಮೋತೆಖಾನ್ ಅವಿರೋಧವಾಗಿ ಆಯ್ಕೆಯಾದರು.

ಉಪಾಧ್ಯಕ್ಷರಾಗಿ ಹೊಳೆಆಲೂರ ಹೋಬಳಿಯ ವೀರಯ್ಯ ವಸ್ತ್ರದ, ಪ್ರಧಾನ ಕಾರ್ಯದರ್ಶಿಯಾಗಿ ವಿರೂಪಾಕ್ಷ ಕಲಬುರ್ಗಿ, ಕಾರ್ಯದರ್ಶಿಯಾಗಿ ವೀರಭದ್ರಯ್ಯ ಹಿರೇಮಠ, ಖಜಾಂಚಿಯಾಗಿ ಖಲೀಲ ಇಟಗಿ, ಕಾರ್ಯಕಾರಿಣಿ ಸಮಿತಿಗೆ ಚಂದ್ರು ನೆಲ್ಲೂರ, ವೀರಯ್ಯ ಪಾಟೀಲ, ಸಂತೋಷ ಹೊಸಳ್ಳಿ ಆಯ್ಕೆಯಾದರು.

ಚುನಾವಣಾಧಿಕಾರಿಗಳಾಗಿ ಜಿಲ್ಲಾ ಕಾರ್ಯದರ್ಶಿ ಸಂಗು ವ್ಯಾಪಾರಿ, ಸಹಾಯಕ ಚುನಾವಣಾಧಿಕಾರಿಗಳಾಗಿ ಮೌನೇಶ ಬಡಿಗೇರ, ಶಿವಕುಮಾರ ಶಶಿಮಠ, ವೆಂಕಟೇಶ ಇಮ್ರಾಪೂರ, ಸೂರಜ ಮಾಯೇಕರ ಕಾರ್ಯ ನಿರ್ವಹಿಸಿದರು.

ಈ ವೇಳೆ ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಯಲ್ಲಪ್ಪ ತಳವಾರ, ಸೋಮು ಲದ್ದಿಮಠ, ಪಿ.ಎಸ್. ಪಾಟೀಲ, ಉಮೇಶಗೌಡ ಬಸನಗೌಡ್ರ, ಕಲ್ಮೇಶ ಗಾಣಿಗೇರ ಉಪಸ್ಥಿತರಿದ್ದರು.

ಹಿಂದೂ ಸಮ್ಮೇಳನ ಸಂಚಾಲನಾ ಸಮಿತಿಯ 'ಹಿಂದೂ ಸಮ್ಮೇಳನ'ದಲ್ಲಿ ಜಗದೀಶ ಕಾರಂತ ಅಭಿಮತ

# ಸವಾಲುಗಳನ್ನು ಮೆಟ್ಟಿ ನಿಲ್ಲುವಂತಾಗಲಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ಭಾರತ ದೇಶದ ಇತಿಹಾಸದ ಇತಿಹಾಸಕಾರರು ಬರೆದಿರುವ ಪುಟಗಳನ್ನು ತಿರುವಿ ಹಾಕಿದಾಗ ಭಾರತ ಹಿಂದೂ ರಾಷ್ಟ್ರ, ಹಿಂದೂಸ್ಥಾನ ಎಂದು ಕರೆಸಿಕೊಂಡಿದೆ. ಹೀಗಾಗಿ ಹಿಂದು ಮತ ವಾಚಕವಲ್ಲ, ಧರ್ಮ ವಾಚಕವಲ್ಲ, ರಾಷ್ಟ್ರ ವಾಚಕ, ರಾಷ್ಟ್ರ ಸೂಚಕವಾಗಿದೆ ಎಂದು ಹಿಂದೂ ಜಾಗರಣಾ ವೇದಿಕೆ ಕ್ಷೇತ್ರೀಯ ಸಂಯೋಜಕರಾದ ಜಗದೀಶ ಕಾರಂತ ಹೇಳಿದರು.

ಡಂಬಳ ಗ್ರಾಮದ ಜಗದ್ಗುರು ತೋಂಟದಾರ್ಯ ಕಲ್ಯಾಣ ಮಂಟಪದ ಆವರಣದಲ್ಲಿ ಹಿಂದೂ ಸಮ್ಮೇಳನ ಸಂಚಾಲನಾ ಸಮಿತಿಯಿಂದ ಹಮ್ಮಿಕೊಂಡಿದ್ದ ಹಿಂದೂ ಸಮ್ಮೇಳನದಲ್ಲಿ ಭಾರತಾಂಬೆಯ ಭಾವಚಿತ್ರಕ್ಕೆ ಪುಷ್ಪ ಅರ್ಪಿಸಿ ಅವರು ಮಾತನಾಡಿದರು.

ಧಾರವಾಡ ವಿಭಾಗದಲ್ಲಿ ಪ್ರಥಮವಾಗಿ ಡಂಬಳದಲ್ಲಿ ಹಿಂದೂ ಸಮ್ಮೇಳನ ನಡೆಸಲಾಗಿದೆ.




ನಮ್ಮ ವಿರೋಧ ಇರುವುದು ಬಾಂಗ್ಲಾದೇಶದಿಂದ ಅಕ್ರಮವಾಗಿ ಬಂದು ನೆಲೆಸಿರುವ ಮುಸ್ಲಿಮರ ಬಗ್ಗೆ, ಅವರು ಮರಳಿ ಅವರ ದೇಶಕ್ಕೆ ಹೋಗಬೇಕು ಎನ್ನುವುದು. ಆರ್‌ಎಸ್‌ಎಸ್ ಗುರ್ತಿಸುವುದಕ್ಕಿಂತ ಮುಂಚೆ ಭಾರತವನ್ನು ಜಗತ್ತು ಗುರ್ತಿಸಿರುವುದು ಹಿಂದೂ ಎಂದು. ದೇಶದ ಎಲ್ಲಾ ಜಮಾತೆ ಇಸ್ಲಾಂ ಸಂಘಟನೆಗಳು ತಮ್ಮ ಸಂಘಟನೆಗಳನ್ನು ಹೆಸರಿಸುವುದು ಜಮಾತೆ ಇಸ್ಲಾಂ ಹಿಂದ್ ಎಂದು. ಆರ್.ಎಸ್.ಎಸ್ ಸಾವಿರಾರು ಹಿಂದೂ ಸಮ್ಮೇಳನ ನಡೆಸುವ ಗುರಿ ಹೊಂದಿದ್ದು, ಆರ್‌ಎಸ್‌ಎಸ್ ನೂರು ವರ್ಷ ತುಂಬಿದ ಹಿನ್ನೆಲೆಯಲ್ಲಿ ದೇಶದ ರಕ್ಷಣೆಗಾಗಿ ಜಾತಿ-ಮತ ಮೀರಿ ಒಂದಾಗಿ ನಡೆಯಬೇಕು. ಸಮಾಜದಲ್ಲಿ ಸಮರಸವಾಗಿ ಬಾಳುವುದನ್ನು ಕಲಿಸುವುದರೊಂದಿಗೆ ದೇಶ ಎದುರಿಸಬಹುದಾದ ಅನೇಕ ಸವಾಲುಗಳನ್ನು ಮೆಟ್ಟಿ ನಿಲ್ಲುವಂತಾಗಬೇಕು ಎಂದು ಹೇಳಿದರು.

ಸಂಜೀವ ರಿತ್ತಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಾರುತಿ ದೇವಸ್ಥಾನದಿಂದ ವಿವಿಧ ವಾದ್ಯಮೇಳದೊಂದಿಗೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಭಾರತಾಂಬೆಯ ಭಾವಚಿತ್ರದೊಂದಿಗೆ ಶೋಭಾಯಾತ್ರೆ ಜರುಗಿತು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಕಳಕಪ್ಪ ಬಂಡಿ, ಡಂಬಳ ಮಂಡಳ ಅಧ್ಯಕ್ಷ ಅಂದಪ್ಪ ಹಾರೂಗೇರಿ, ಹಿಂದೂ ಸಮ್ಮೇಳನದ ಅಧ್ಯಕ್ಷ ಮಲ್ಲೇಶ ಮಠದ, ಉಪಾಧ್ಯಕ್ಷ ಹನುಮಪ್ಪ ಹಾದಿಮನಿ, ಬಾಬು ರಾಠೋಡ, ಡಿ. ಪ್ರಸಾದ, ಮಂಜುನಾಥ ಇಟಗಿ, ರವಿ ಕರಿಗಾರ, ನಾಗರಾಜ ಕಾಟ್ರಳ್ಳಿ, ಈಶ್ವರಗೌಡ ಪಾಟೀಲ, ಸಮಿತಿಯ ಪ್ರಮುಖರಾದ ಬೀರಪ್ಪ ಬಂಡಿ, ವೆಂಕನಗೌಡ ಪಾಟೀಲ್, ಮುದಿಲಿಂಗಪ್ಪ ಕೊರ್ಲಹಳ್ಳಿ, ನಾಗರಾಜ ಕಾಟ್ರಳ್ಳಿ, ಈಶ್ವರಗೌಡ, ಕುಬೇರಪ್ಪ ಬಂಡಿ, ಕೃಷ್ಣ ಬಂಡಿ, ಪ್ರಭು ಕರಮುಡಿ,

ದೇವಪ್ಪ ಇಟಗಿ, ಕೃಷ್ಣಾ ಬಂಡಿ, ಶರಣಪ್ಪ ಕೊಂಬಳಿ, ಮಹಾದೇವಪ್ಪ ತೋಟಪ್ಪನವರ, ಬಸವರಾಜ ಚನ್ನಳ್ಳಿ, ಪಕ್ಕಣನಗೌಡರ ರಡ್ಡೆರ, ರಮೇಶ ತುರಕಾಣಿ, ಪ್ರಕಾಶ ಕೋಂತಬ್ರಿ, ಶಿವಾನಂದ ಬಂಡಿ, ಹನಮಂತ ಪೂಜಾರ, ಪಾಂಡಪ್ಪ ರಾಠೋಡ, ಲಕ್ಷ್ಮಣ ರಾಠೋಡ, ಬಸವಂತಪ್ಪ ಬಡಿಗೇರ, ಬಾಬಣ್ಣ ರಾಠೋಡ, ಸಿದ್ಧನಗೌಡ ಪಾಟೀಲ, ನಿಂಗಣಗೌಡ ಹರ್ತಿ, ಮಂಜುನಾಥ ರಾಮೇನಳ್ಳಿ, ಈಶಪ್ಪ ರಂಗಪ್ಪನವರ, ಮಿತ್ತಯ್ಯಜ್ಜ ಹರ್ತಿಮಠ, ಕೃಷ್ಣಪ್ಪ ನಗರ, ದೇವಪ್ಪ ಕಲಿವಾಳ, ವಾಸುದೇವ ಪಾಟೀಲ, ಮುದಕಪ್ಪ ಮುಳಗುಂದ, ಮುತ್ತು ಚಿನ್ನಪ್ಪಗೌಡರ, ಮಂಜುನಾಥ ಇಟಗಿ, ರವಿ ಕರಿಗಾರ, ಮುತ್ತು ಚಿನ್ನಪ್ಪಗೌಡರ, ಸೋಮಶೇಖರಯ್ಯ ಹಿರೇಮಠ, ಲಕ್ಷ್ಮಣ ಬೂದಿಹಾಳ, ಯಲ್ಲಪ್ಪ ಮುದಗಣ್ಣನವರ, ಸಂಭು ಸಂದಿಗೌಡ ಮುಂತಾದವರಿದ್ದರು.

ಹರ್ಲಾಪೂರದ ಡಾ. ಅಭಿನವ ಕೊಟ್ಟೂರೇಶ್ವರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಮಾತನಾಡಿ, ಒಂದು ಸಮಾಜ ಎಂಬುದು ದ್ವಾರಬಾಗಿಲು ಇದ್ದಂತೆ. ಜಾತಿ-ಮತ ಇಲ್ಲದೆ ಹಿಂದೂಗಳು ನಾವೆಲ್ಲ ಬಂಧುಗಳು ಎಂಬ ಭಾವನೆಯಿಂದ ಹೊರಟು ಎಲ್ಲವನ್ನು ಅಪ್ಪಿಕೊಳ್ಳುವ ಸಮಾಜವಾಗಿದೆ. ಜಾತ್ಯಾತೀತವಾಗಿ ಎಲ್ಲರೂ ಧೈರ್ಯದಿಂದ ಹಿಂದೂಗಳು ಎನ್ನುವುದು ಅಗತ್ಯವಿದೆ. ಇದು ಭ್ರಾತೃತ್ವ ತೋರಿಸುತ್ತದೆ ಎಂದು ಹೇಳಿದರು.

# ಸೇವಾದಳ ದೇಶಪ್ರೇಮ ಮೂಡಿಸುತ್ತಿದೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತ ಸೇವಾದಳವು ಮಕ್ಕಳಲ್ಲಿ ದೇಶಪ್ರೇಮವನ್ನು ಮೂಡಿಸುವ ಕಾರ್ಯವನ್ನು ನಿರಂತರವಾಗಿ ಮಾಡುತ್ತಿದ್ದು, ಇದರಲ್ಲಿ ಪಾಲ್ಗೊಳ್ಳುವ ಮಕ್ಕಳಲ್ಲಿ ರಾಷ್ಟ್ರಭಕ್ತಿಯ ಜಾಗೃತಿ ತರುವಲ್ಲಿ ವಿಶೇಷ ಕಾರ್ಯ ಮಾಡುತ್ತಿದೆ ಎಂದು ತಾಲೂಕಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪೂರ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಪಿ.ಎಂ.ಶ್ರೀ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ ನಂ. 4ರಲ್ಲಿ ಜರುಗಿದ ಭಾರತ ಸೇವಾದಳ ಅಮೃತ ಮಹೋತ್ಸವದ ಅಂಗವಾಗಿ ಜರುಗಿದ ಭಾರತ ಸೇವಾದಳ ಸಪ್ತಾಹವನ್ನು ಉದ್ಘಾಟಿಸಿ ಮಾತನಾಡಿದರು.

ಭಾರತ ಸೇವಾದಳ ಶಿಸ್ತು, ದೇಶಪ್ರೇಮ, ರಾಷ್ಟ್ರೀಯ ಭಾವೈಕ್ಯತೆ, ಸೇವಾ ಮನೋಭಾವನೆಯಂತಹ ಉತ್ತಮವಾದ ಶಿಕ್ಷಣವನ್ನು ನೀಡುತ್ತಿದ್ದು, ಇದರ ಪ್ರಯೋಜನವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದು ಹೇಳಿದರು. ಭಾರತ ಸೇವಾದಳ ಜಿಲ್ಲಾ ಸಂಘಟಕ ಕುಮಾರಸ್ವಾಮಿ ಬಳ್ಳಾರಿ ಮಾತನಾಡಿ, ಜಿಲ್ಲೆಯ ತಾಲೂಕುಗಳಲ್ಲಿ ವಿವಿಧ ಶಾಲಾ ಕಾಲೇಜುಗಳಲ್ಲಿ ಸೇವಾದಳದ ಸಪ್ತಾಹವನ್ನು ಭಾರತ ಸೇವಾದಳ ಜಿಲ್ಲಾ ಸಮಿತಿ ಹಾಗೂ ಶಾಲಾ ಶಿಕ್ಷಣ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯಗಳ ಸಹಯೋಗದಲ್ಲಿ ಒಂದು ವಾರಗಳ ಕಾಲ ಆಯೋಜಿಸಲಾಗಿದ್ದು, ಈ ಕಾರ್ಯಕ್ರಮಗಳಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಭಾವೈಕ್ಯತೆ, ರಾಷ್ಟ್ರಧ್ವಜದ ಸಂಪೂರ್ಣ ಮಾಹಿತಿ, ಯೋಗ, ನೈತಿಕ ಶಿಕ್ಷಣ ತರಬೇತಿಯನ್ನು ನೀಡಲಾಗುವುದೆಂದು ಹೇಳಿದರು.

ಮುಖ್ಯೋಪಾಧ್ಯಾಯ ಎಸ್.ಬಿ. ಸಣ್ಣಮನಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ತಾಲೂಕಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಚಂದ್ರಕಾಂತ್ ನೇಕಾರ, ಶಾಲೆಯ ಭಾರತ ಸೇವಾದಳ ತಾಲೂಕಾ ಅಧಿನಾಯಕಿ ಜಿ.ಎಸ್. ಗುಡಗೇರಿ, ಶಿಕ್ಷಕರಾದ ತಾಯಮ್ಮನವರ, ಶಶಿಕುಮಾರ್ ಲಮಾಣಿ, ಶ್ರೀಮತಿ ಹಳ್ಯಾಳ, ಭಾರತ ಸೇವಾದಳ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ವಿಶ್ವಮಾನವ ರಾಷ್ಟ್ರಕವಿ ಕುವೆಂಪು ಅವರ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು.

# ವಿದ್ಯುತ್ ಅವಘಡದಿಂದ ಅಪಾರ ಹಾನಿ ಸೂಕ್ತ ಪರಿಹಾರ ನೀಡಲು ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿ ಟೆಂಗಿನಕಾಯಿ ಬಜಾರದಲ್ಲಿ 30 ವರ್ಷಗಳಿಂದ ವ್ಯಾಪಾರ ವಹಿವಾಟು ನಡೆಸುತ್ತಾ ಬಂದಿರುವ ಎನ್.ಟಿ. ಅರವಟಗಿಯವರ ಅಂಗಡಿಯಲ್ಲಿ ಆಕಸ್ಮಿಕವಾಗಿ ಸಂಭವಿಸಿದ ವಿದ್ಯುತ್ ಅವಘಡದಿಂದ ಸಂಪೂರ್ಣ ಸುಟ್ಟು ಹಾನಿಯಾಗಿದ್ದು, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷರಾದ ಶರಣಬಸಪ್ಪ ಸಂಗಪ್ಪ ಗುಡಿಮನಿ, ಸಂಸ್ಥೆಯ ಪದಾಧಿಕಾರಿಗಳು ಮತ್ತು ಸಂಸ್ಥೆಯ ವಿದ್ಯುತ್ ಉಪ ಸಮಿತಿ ಚೇರಮನ್ ಉದಯರವಿ ಕೆ.ಗುಡಿಮನಿ ಇವರು ಭೇಟಿ ನೀಡಿ ಧೈರ್ಯ ತುಂಬಿದರು.

ಸಂಸ್ಥೆಯ ವಿದ್ಯುತ್ ಉಪ ಸಮಿತಿ ಚೇರಮನ್ ಉದಯರವಿ ಕೆ.ಗುಡಿಮನಿ, ಅವಘಡದಿಂದ ಆದ ನಷ್ಟವನ್ನು ಹೆಸ್ಕಾಂ ಇಲಾಖೆ ಭರಿಸಬೇಕು ಹಾಗೂ ಸೂಕ್ತ ಪರಿಹಾರವನ್ನು ನಿಗದಿತ



ಸಮಯದಲ್ಲಿ ನೀಡಬೇಕೆಂದು ಒತ್ತಾಯಿಸಿದರು.

ವಿದ್ಯುತ್ ಪರಿವೀಕ್ಷಕರು ಸ್ಥಳಕ್ಕೆ ಭೇಟಿ ನೀಡಿ, ವರದಿಯನ್ನು ತಯಾರಿಸಿ ಶೀಘ್ರವೇ ಪರಿಹಾರ ನೀಡಬೇಕೆಂದು ಮನವಿ ಮಾಡಲಾಯಿತು. ಇಂತಹ ಅವಘಡ ಸಂಭವಿಸಿದಲ್ಲಿ ಅವರು ಸಮಸ್ಯೆಗಳಿಂದ ಹೊರಗೆ ಬರಲು ಸಾಧ್ಯವಾಗುವುದಿಲ್ಲ. ಈ ನಿಟ್ಟಿನಲ್ಲಿ ಸರ್ಕಾರವು ಅವರಿಗೆ ಸೂಕ್ತ ಪರಿಹಾರ ಒದಗಿಸುವ ಮೂಲಕ ವ್ಯಾಪಾರಕ್ಕೆ ಅನುಕೂಲ ಮಾಡಿಕೊಡಬೇಕೆಂದು ಸರ್ಕಾರಕ್ಕೆ ಸಂಸ್ಥೆಯ ಅಧ್ಯಕ್ಷರಾದ ಶರಣಬಸಪ್ಪ ಸಂಗಪ್ಪ ಗುಡಿಮನಿ ಸೇರಿದಂತೆ ಪದಾಧಿಕಾರಿಗಳು ಮನವಿ ಮಾಡಿರುವುದಾಗಿ ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಪ್ರಭಣ ಹುಣಸಿಕಟ್ಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿವೇಶನ ಹಂಚಿಕೆ ಮಾಡದಿದ್ದರೆ ಹೋರಾಟ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಪಟ್ಟಣದಲ್ಲಿ ಬಡ ಜನತೆಗೆ ವಸತಿ ಸೌಲಭ್ಯವನ್ನು ಕಲ್ಪಿಸುವುದಕ್ಕಾಗಿ 2015ರಲ್ಲಿಯೇ ಜಮೀನು ಖರೀದಿ ಮಾಡಿದ್ದರೂ ಇಲ್ಲಿಯವರೆಗೂ ಫಲಾನುಭವಿಗಳಿಗೆ ನಿವೇಶನ ಮಂಜೂರ ಮಾಡಿಲ್ಲ. ಕೂಡಲೇ ನಿವೇಶನ ಹಂಚಿಕೆ ಮಾಡದಿದ್ದರೆ ಪಟ್ಟಣ ಪಂಚಾಯಿತಿ ಕಚೇರಿಗೆ ಬೀಗ ಜಡಿದು ಹೋರಾಟ ಮಾಡಲಾಗುವುದು ಎಂದು ಅಖಿಲ ಕರ್ನಾಟಕ ಡಿ.ಕೆ. ಶಿವಕುಮಾರ ಅಭಿಮಾನಿಗಳ ಸಂಘದ ವತಿಯಿಂದ ಸೋಮವಾರ ತಹಸೀಲ್ದಾರ ಕೆ.ರಾಘವೇಂದ್ರ ರಾವ್ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಮಹಾಂತೇಶ ದಶಮನಿ, ತಾಲೂಕಾಧ್ಯಕ್ಷ ಬಸವರಾಜ ಕಂಬಳಿ, ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಅವರ ಇಚ್ಛಾಶಕ್ತಿಯಿಂದ ಶಿರಹಟ್ಟಿ ಪಟ್ಟಣದಲ್ಲಿ 2015ರಲ್ಲಿಯೇ 5 ಎಕರೆ ಜಮೀನು ಖರೀದಿ ಮಾಡಿದೆ. ನಿವೇಶನ ವಂಚಿತರು ನಿತ್ಯವೂ ಪಟ್ಟಣ ಪಂಚಾಯಿತಿಗೆ ಅಲೆದಾಡುವ ಪರಿಸ್ಥಿತಿ ಬಂದಿದೆ. ಆದ್ದರಿಂದ ಜನವರಿ 26ರ ಒಳಗಾಗಿ ಅರ್ಹ ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡದೇ ಇದ್ದಲ್ಲಿ ಜಿಲ್ಲಾ ಸಂಘಟನೆ ವತಿಯಿಂದ ಪಟ್ಟಣ ಪಂಚಾಯಿತಿ ಕಾರ್ಯಾಲಯಕ್ಕೆ ಬೀಗ ಜಡಿದು ತಾಲೂಕಾ ದಂಡಾಧಿಕಾರಿಗಳ ಕಚೇರಿ ಎದುರು ಧರಣಿ ಸತ್ಯಾಗ್ರಹ ಮಾಡಬೇಕಾಗುತ್ತದೆ. ಇದಕ್ಕೆ ಆಸ್ಪದ ನೀಡದೇ ಅರ್ಹ ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡಬೇಕೆಂದು ಮನವಿ ಮೂಲಕ ಒತ್ತಾಯಿಸಿದರು.

ಅಲೆಮಾರಿ ಜನಾಂಗದ ಮುಖಂಡ ರವಿ ಘಂಟಿ, ಜಗದೀಶ ಇಟ್ಟೇಕಾರ, ಆನಂದ ಸ್ವಾಮಿ, ಬಸವರಾಜ ಪರಿಯವರ, ಸೋಮು ರೋಗಿ ಮುಂತಾದವರು ಉಪಸ್ಥಿತರಿದ್ದರು.

# ಬಿಜೆಪಿ ಶಾಸಕ ಶರಣು ಸಲಗರ್ ಮೇಲೆ ಎಫ್‌ಐಆರ್: ಚುನಾವಣೆ ವೇಳೆ 99 ಲಕ್ಷ ಸಾಲ ಪಡೆದು ವಂಚನೆ ಆರೋಪ

■ವಿಜಯಸಾಕ್ಷಿ ಸುದ್ದಿ, ಬೀದರ್

2023 ರ ವಿಧಾನಸಭಾ ಚುನಾವಣೆಯ ಸಮಯದಲ್ಲಿ ಸಾಲವಾಗಿ ಪಡೆದಿದ್ದ ಹಣವನ್ನು ಹಿಂದಿರುಗಿಸಲು ವಿಫಲವಾದ ಆರೋಪದ ಮೇಲೆ 99 ಲಕ್ಷ ರೂ.ಗಳ ಚೆಕ್ ಅಮಾನ್ಯವಾದ ದೂರಿಗೆ ಸಂಬಂಧಿಸಿದಂತೆ ಬಿಜೆಪಿ ಶಾಸಕ ಶರಣು ಸಲಗರ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ. ದೂರುದಾರರ ದೂರದ ಸಂಬಂಧಿ ಎಂದು ಹೇಳಲಾಗುವ ಶಾಸಕರು, ಚುನಾವಣಾ ಸಂಬಂಧಿತ ವೆಚ್ಚಗಳನ್ನು ಪೂರೈಸಲು ಆರ್ಥಿಕ ಸಹಾಯವನ್ನು ಕೋರಿದ್ದರು ಮತ್ತು ಜನವರಿ ಮತ್ತು ಫೆಬ್ರವರಿ 2023 ರ ನಡುವೆ ಬಹು ಕಂತುಗಳಲ್ಲಿ ಮೊತ್ತವನ್ನು ಪಡೆದರು, ಆರು ತಿಂಗಳೊಳಗೆ ಮರುಪಾವತಿ ಮಾಡುವುದಾಗಿ ಭರವಸೆ ನೀಡಿದರು ಎಂದು ಅವರು ಹೇಳಿದ್ದಾರೆ.

ಆದಾಗ್ಯೂ, ದೂರುದಾರರು ಎರಡು ವರ್ಷಗಳ ಕಾಲ ಕಾಯುತ್ತಿದ್ದರು, ಆದರೆ ಪದೇ ಪದೇ ನೆನಪಿಸಿದ ನಂತರವೂ ಶಾಸಕರು ಎರವಲು ಪಡೆದ ಮೊತ್ತವನ್ನು ಹಿಂದಿರುಗಿಸುವ ಯಾವುದೇ ಲಕ್ಷಣಗಳನ್ನು ತೋರಿಸದಿದ್ದಾಗ, ಸೆಪ್ಟೆಂಬರ್ 14, 2025 ರಂದು ಹಿರಿಯರು ಸಭೆ ಕರೆದರು, ಅಲ್ಲಿ ಶಾಸಕರು ಹೊಣೆಗಾರಿಕೆಯನ್ನು ಒಪ್ಪಿಕೊಂಡು 99 ಲಕ್ಷ ರೂ.ಗಳ ಚೆಕ್ ನೀಡಿದರು ಎಂದು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ. ಸೆಪ್ಟೆಂಬರ್ 16 ರಂದು ದೂರುದಾರರ ಕುಟುಂಬ ಸದಸ್ಯರು ಚೆಕ್ ಠೇವಣಿ ಇಡಬಹುದೇ ಎಂದು ಖಚಿತಪಡಿಸಲು ಶಾಸಕರ ನಿವಾಸಕ್ಕೆ ಭೇಟಿ ನೀಡಿದಾಗ, ಶಾಸಕರು ಆಕ್ರಮಣಕಾರಿಯಾಗಿ ವರ್ತಿಸಿದರು ಮತ್ತು ಬೆದರಿಕೆ ಹಾಕಿದರು ಎಂದು ಎಫ್‌ಐಆರ್‌ನಲ್ಲಿ ಆರೋಪಿಸಲಾಗಿದೆ.

# ಪ್ರಧಾನಿ ದೇಶದ ಜನರನ್ನು ಒಗ್ಗೂಡಿಸುತ್ತಿದ್ದಾರೆ


▶▶ಮೊದಲನೇ ಪುಟದಿಂದ

ಪಡೆದು ವಿದ್ಯೆ ಪಡೆದಿರುವುದು, ದಲ್ಲಾಳಿಗಳನ್ನು ದೂರ ಮಾಡಿ ರೈತ-ರೇ ರೈತ ಉತ್ಪಾದಕ ಕಂಪನಿಗಳನ್ನು ತೆರೆದಿರುವುದು ಇತ್ಯಾದಿಗಳೊಂದಿಗೆ ಹೆಣ್ಣು ಮಕ್ಕಳ ಸಾಧನೆ, ರೈತರ ಸಾಧನೆಗಳನ್ನು ಮನ್‌ಕಿ ಬಾತ್‌ನಲ್ಲಿ ಹೇಳುವ ಮೂಲಕ ಸ್ಫೂರ್ತಿದಾಯಕ ಕೆಲಸ ಮಾಡುತ್ತಿದ್ದಾರೆ ಎಂದರು.

ಈ ಸಂಧರ್ಭದಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ಶಿರಹಟ್ಟಿ ಮಂಡಳದ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ರಾಜ್ಯ ರೈತ ಮೋರ್ಚಾ ಕಾರ್ಯದರ್ಶಿ ಬಸವರಾಜ ಕುಂದಗೋಳಮಠ, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ಬಸವರಾಜ ಇಟಗಿ, ತಿಮ್ಮರಡ್ಡಿ ಮರಡ್ಡಿ, ಸಣ್ಣೀರಪ್ಪ ಹಳ್ಳೆಪ್ಪನವರ, ನಾಗರಾಜ ಕುಲಕರ್ಣಿ, ಶಿವಪ್ರಕಾಶ ಮಹಾಜನಶೆಟ್ಟರ, ತಿಪ್ಪಣ್ಣ ಕೊಂಚಿಗೇರಿ, ಜಾನು ಲಮಾಣಿ, ಥಾವರಪ್ಪ ಲಮಾಣಿ, ಅಶ್ವಿನಿ ಅಂಕಲಕೋಟಿ, ಗಂಗಾಧರ ಮೆಣಸಿನಕಾಯಿ, ವಿಜಯ ಕುಂಬಾರ, ನವೀನ ಹಿರೇಮಠ, ಅಶೋಕ ಸೂರಣಗಿ, ಕುಮಾರ ಬೆಟಗೇರಿ, ಸಚಿನ ಮೆಲ್ಮುರಿ, ಈರಣ್ಣ ಶಿರನಹಳ್ಳಿ, ಫಕ್ಕೀರೇಶ ರಗಟಿ, ದ್ಯಾಮಣ್ಣ ನೀರಲಗಿ, ಮಲ್ಲಪ್ಪ ಮಠಪತಿ ಸೇರಿದಂತೆ ಗ್ರಾಮಸ್ಥರು, ಪ್ರಮುಖರು ಉಪಸ್ಥಿತರಿದ್ದರು.

# ನಿಧನ

## ಶರಣಪ್ಪ ಗುರಪ್ಪ ಹೊಸಳ್ಳಿ



**ಗದಗ:** ತಾಲೂಕಿನ ಹುಯಿಲಗೋಳ ಗ್ರಾಮದ ನಿವಾಸಿ, ಪಂಚಮಸಾಲಿ ಸಮಾಜದ ಹಿರಿಯರಾದ ಶರಣಪ್ಪ ಗುರಪ್ಪ ಹೊಸಳ್ಳಿ (73) ಸೋಮವಾರ ನಿಧನರಾದರು.

ಮೃತರಿಗೆ ಪತ್ನಿ, ಗದಗ ಶಹರ ಪೊಲೀಸ್ ಠಾಣೆಯ ಪೇದೆ ಜಗದೀಶ ಹೊಸಳ್ಳಿ ಸೇರಿ ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿ ಅಪಾರ ಬಂಧು-ಬಳಗವಿದೆ.

## ಯಲ್ಲಮ್ಮ ಬಮ್ಮನಕಟ್ಟಿ



**ಲಕ್ಷ್ಮೇಶ್ವರ:** ತಾಲೂಕಿನ ಶಿಗ್ಲಿ ಗ್ರಾಮದ ಹಿರಿಯರಾದ ಯಲ್ಲಮ್ಮ ಮೈಲಾರಪ್ಪ ಬಮ್ಮನಕಟ್ಟಿ (73) ಸೋಮವಾರ ನಿಧನರಾದರು.

ಮೃತರಿಗೆ ಪತ್ರಕರ್ತ, ಸಾಹಿತಿ ಡಾ. ಮಂಜುನಾಥ ಬಮ್ಮನಕಟ್ಟಿ ಸೇರಿ ಮೂವರು ಪುತ್ರರು, ಪುತ್ರಿ ಸೇರಿ ಅಪಾರ ಬಂಧು-ಬಳಗವಿದೆ.

ವೀರಶೈವ ಲಿಂಗಾಯತ ಮಠಗಳು ಮಾಡಿರುವ ಪುಣ್ಯ ಕಾರ್ಯಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ:ಬಸವರಾಜ ಬೊಮ್ಮಾಯಿ

# ಎಲ್ಲ ಸಮಸ್ಯೆಗಳಿಗೆ ಬಸವಾದಿ ಶರಣರಲ್ಲಿ ಉತ್ತರ ಇದೆ



■ವಿಜಯಸಾಕ್ಷಿ ಸುದ್ದಿ, ಹಾವೇರಿ

ವೀರಶೈವ ಲಿಂಗಾಯತ ಮಠಗಳು ಮುನ್ನೂರು ನಾಲ್ಕುನೂರು ವರ್ಷಗಳಿಂದ ಮಾಡಿರುವ ಪುಣ್ಯ ಕಾರ್ಯಕ್ಕೆ ಯಾವುದೇ ರೀತಿ ಬೆಲೆ ಕಟ್ಟಲು ಸಾಧ್ಯವಿಲ್ಲ. ಅಂತಹ ಸಂಸ್ಕಾರ ಮತ್ತು ಸಂಸ್ಕೃತಿ ಕೊಟ್ಟಿದ್ದಾರೆ. ನಮ್ಮ ಎಲ್ಲ ಸಮಸ್ಯೆಗಳಿಗೆ ಬಸವಾದಿ ಶರಣರಲ್ಲಿ ಉತ್ತರ ಇದೆ. ಅದನ್ನು ಅರ್ಥ ಮಾಡಿಕೊಂಡರೆ ಬದುಕು ಸಾರ್ಥಕವಾಗುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಹಾವೇರಿಯ ಹುಕ್ಕೇರಿ ಮಠದ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದರು. ನಿದ್ದಿ ಬಂದವರಿಗೆ ಹಾಸಿಗೆ ಇರುವುದಿಲ್ಲ ಹಾಸಿಗೆ ಇದ್ದವರಿಗೆ ನಿದ್ದಿ ಬರುವುದಿಲ್ಲ. 9ನೇ ತಾರಿಖಿನಿಂದ ನಡೆದ ಪ್ರವಚನವನ್ನು ಯಾರು ಕೇಳಿದ್ದಾರೆ. ಅವರಿಗೆ ಯಾರಿಗೆ ನಿದ್ದೆ ಇಲ್ಲ ಅವರಿಗೆ ನಿದ್ದೆ ಸಿಕ್ಕಿದೆ. ಹಾಸಿಗೆ ಇಲ್ಲದವರಿಗೆ ಹಾಸಿಗೆ ಸಿಕ್ಕಿದೆ ಅಂದರೆ ಮನಶಾಂತಿ ಸಿಕ್ಕಿದೆ. ಭಗವಂತ ನಮ್ಮನ್ನು ಈ ಭೂಮಿಗೆ ಬಿಟ್ಟಿರುವುದು ಪರೀಕ್ಷೆ ಮಾಡಲು ಬದುಕಿನ ಉದ್ದೇಶ ಯಾರು ತಿಳಿದುಕೊಳ್ಳುತ್ತಾರೆ ಅವರು ಪಾಸಾಗುತ್ತಾರೆ. ಯಾರು ತಿಳಿದುಕೊಳ್ಳುವುದಿಲ್ಲ ಅವರು ಪಾಸಾಗುವುದಿಲ್ಲ. ಮೈಮುರಿದು ದುಡಿದವನಿಗೆ ಎಲ್ಲಿ ಮಲಗಿದರೂ ನಿದ್ದೆ ಬರುತ್ತದೆ. ದೊಡ್ಡ ದೊಡ್ಡ ಹಾಸಿಗೆ ತೆಗೆದುಕೊಂಡವನಿಗೆ ಎಲ್ಲಿ ಮಲಗಿದರೂ ನಿದ್ದೆ ಬರುವುದಿಲ್ಲ, ಬದುಕನ್ನು ಸ್ವಲ್ಪ ಸ್ವಚ್ಛ ಮಾಡಿಕೊಂಡರೆ ನಿದ್ದೆ ಬರುತ್ತದೆ ಎಂದು ಹೇಳಿದರು.

ಹಾವೇರಿ ಜಿಲ್ಲೆ ಶರಣರ ಸಂತರ ನಾಡು ಬದುಕಿನ ತಿರುವುಗಳನ್ನು ಅತ್ಯಂತ ಮಾರ್ಮಿಕವಾಗಿ ತಿಳಿಸಿರುವ ನಾಡು, ಹಾವೇರಿ ಜಿಲ್ಲೆ ತುಂಗಭದ್ರೆಯ ತಟದಿಂದ ವರದಾ ನದಿವರೆಗೂ ಇರುವ ಈ ನಾಡು ಶರಣರ ಆದರ್ಶಗಳನ್ನು ತಿಳಿಸಿರುವ ನಾಡು. ಒಂದೆಡೆ ಅಬಲೂರಿನ ಸರ್ವಜ್ಞ, ಆತ ಹೇಳಿರುವ ಒಂದೊಂದು ಮಾತು ಸರ್ವ ಜ್ಞಾನಿಗಳಿಗೂ ತಿಳಿಯುತ್ತದೆ. ಸಮಾಜವನ್ನು ಅತ್ಯಂತ ಮಾರ್ಮಿಕವಾಗಿ ಹೇಳಿರುವ ಕನಕದಾಸರ ನಾಡು. ಆರು ನೂರು ವರ್ಷಗಳ ಹಿಂದೆ ಕ್ರಾಂತಿ ಮಾಡಿದ ಕನಕದಾಸರು, ಸಾಮರಸ್ಯ ಸಾಧಿಸಿರುವ ಶಿಶುನಾಳ ಶರೀಫರು ಮತ್ತು ಗೋವಿಂದ ಭಟ್ಟರು ನಮ್ಮ ಜಿಲ್ಲೆಯಲ್ಲಿದ್ದಾರೆ. ನಮ್ಮ ಹುಕ್ಕೇರಿ ಮಠದ ಶಿವಲಿಂಗೇಶ್ವರ ಮಹಾಸ್ವಾಮಿಗಳು, ಶಿವಬಸವ ಸ್ವಾಮೀಜಿಗಳು ಕಲಿಯುಗದಲ್ಲಿ ಭಕ್ತಿಯನ್ನು ಎಲ್ಲರಿಗೂ ಹಂಚಿದ ಪೂಜೆಯೆಂಬ ದೀಪವನ್ನು ಎಲ್ಲೆಡೆ ಹಂಚಿದ ನಾಡು, ಈ ಜಿಲ್ಲೆಯಲ್ಲಿ ಹುಟ್ಟಿದ ಎಲ್ಲರೂ ಪುಣ್ಯವಂತರು. ಇಲ್ಲಿ ದಾನಿಗಳೂ ಎಷ್ಟು ಪ್ರಮಾಣದಲ್ಲಿ, ಯಾವ ರೂಪದಲ್ಲಿ ಕೊಟ್ಟಿದ್ದಾರೆ ಎನ್ನುವುದನ್ನು ಅಭ್ಯಾಸ ಮಾಡಿದರೆ ಮನುಷ್ಯನ ಗುಣಧರ್ಮದ ಪಿಎಚ್‌ಡಿ ಮಾಡಬಹುದು. ಬಡವ, ರೈತ ಜೋಳ ಕೊಟ್ಟಿದ್ದಾನೆ. ಇದ್ದವರು ಬೆಲ್ಲ, ಸಕ್ಕರಿ ಕೊಟ್ಟಿದ್ದಾರೆ. ತಾಯಂದಿರು ಹೋಳಿಗೆ, ಚಕ್ಕುಲಿ ಕೊಟ್ಟಿದ್ದಾರೆ. ಅಲ್ಲಿಂದ ಹಿಡಿದು ಬೆಳ್ಳಿ ಸಿಂಹಾಸನವನ್ನು ಕೊಟ್ಟಿದ್ದಾರೆ. ಎಲ್ಲರ ಭಕ್ತಿಯೂ ಸಮ. ಭಕ್ತಿಯ ರಸ ಹುಕ್ಕೇರಿ ಮಠದಲ್ಲಿ ಉಕ್ಕಿ ಹರಿಯುತ್ತಿದೆ. ಈ ಕಾಲದಲ್ಲಿ ನಾವಿದ್ದೇವೆ ಎನ್ನುವುದು ಪುಣ್ಯ ಎಂದು ಹೇಳಿದರು.

ಭಕ್ತರ ಜಯಘೋಷಗಳ ನಡುವೆ ಶ್ರೀಗಳ ಪುರ ಪ್ರವೇಶ । ಭವ್ಯ ಸಾರೋಟ ಮೆರವಣಿಗೆ

# ಸರ್ವಧರ್ಮ ಸಮನ್ವಯ ಪೀಠ ಗ್ರಾಮದ ದೀವಿಗೆ



> ಮಾರನಬಸರಿ ಗ್ರಾಮಸ್ಥರ ಏಕತೆ ಮತ್ತು ಸೌಹಾರ್ದತೆಯನ್ನು ಪತ್ರಿಕೆಗಳಲ್ಲಿ ಓದಿ ತಿಳಿದುಕೊಳ್ಳುತ್ತಿದ್ದೆ. ಆದರೆ ಶಿವಮೂರ್ತಿ ಶ್ರೀಗಳು ನಮ್ಮನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿ, ನಮಗೆ ಗ್ರಾಮದ ಇತಿಹಾಸವನ್ನು ತಿಳಿಸಿಕೊಟ್ಟಿದ್ದಾರೆ. ಶ್ರೀಗಳು ಬಸವಣ್ಣನವರ ತತ್ವಗಳ ಮೇಲೆ ನಂಬಿಕೆ ಇಟ್ಟುಕೊಂಡವರು. ಎಲ್ಲ ಜನಾಂಗದವರ ಪ್ರೀತಿಯನ್ನು ಸಂಪಾದಿಸಿದ್ದಾರೆ. ಗ್ರಾಮದ ಸರ್ವಧರ್ಮ ಸಮನ್ವಯ ಪೀಠ ಮತ್ತಷ್ಟು ಎತ್ತರಕ್ಕೆ ಬೆಳೆದು ಭಕ್ತರ ಬಾಳಿನಲ್ಲಿ ಬೆಳಕು ಹರಿಸಲಿ.
> – ಹಜರತ್ ಸುಲೇಮಾನ ಶಾವಲಿ ದರ್ಗಾದ ಅಜ್ಜನವರು. ರೋಣ.



**■ವಿಜಯಸಾಕ್ಷಿ ಸುದ್ದಿ, ರೋಣ**

ಇಲ್ಲಿನ ಮಾರನಬಸರಿ ಗ್ರಾಮದ ಸರ್ವಧರ್ಮ ಸಮನ್ವಯ ಪೀಠಕ್ಕೆ ಚನ್ನಬಸವ ಶ್ರೀಗಳನ್ನು ನೇಮಕ ಮಾಡಲಾಗಿದೆ ಎಂದು ಸರ್ವಧರ್ಮ ಸಮನ್ವಯ ಪೀಠದ ಮುಖ್ಯ ಪೀಠಾಧಿಪತಿಗಳು ಹಾಗೂ ಶಿವಮೊಗ್ಗ ಜಿಲ್ಲೆಯ ಸೊರಬ ತಾಲೂಕಿನ ಹಿರೇಮಾಗಡಿ ವಿರಕ್ತಮಠದ ಶಿವಮೂರ್ತಿ ಶ್ರೀಗಳು ಹೇಳಿದರು.

ಅವರು ಸೋಮವಾರ ಶ್ರೀಗಳ ಪುರ ಪ್ರವೇಶದ ನಿಮಿತ್ತ ಹಮ್ಮಿಕೊಂಡಿದ್ದ 510 ಮಹಿಳೆಯರಿಂದ ಆರತಿ ಹಾಗೂ ಶ್ರೀಗಳ ಪುರ ಪ್ರವೇಶದ ಸಾರೋಟ ಮೆರವಣಿಗೆಗೆ ಚಾಲನೆ ನೀಡಿ ಆಶೀರ್ವಚನ ನೀಡಿದರು.

ಮಾರನಬಸರಿ ಗ್ರಾಮ ಐತಿಹಾಸಿಕ ಹಿನ್ನೆಲೆಯನ್ನು ಹೊಂದಿದೆ. ಈ ಗ್ರಾಮದಲ್ಲಿನ ಸರ್ವ ಜನಾಂಗದವರು ಏಕತೆ ಮತ್ತು ಸಹೋದರತೆಯಿಂದ ಜೀವನ ನಡೆಸುತ್ತಿರುವುದು ನಾಡಿಗೆ ಮಾದರಿಯಾಗಿದೆ. ಇಂತಹ ಗ್ರಾಮದಲ್ಲಿ ಸಿದ್ದನಕೊಳ್ಳದ ಶಿದ್ದಯ್ಯಜ್ಜನವರು ಜನ್ಮ ತಾಳಿ ಗ್ರಾಮದ ಕೀರ್ತಿಯನ್ನು ಹೆಚ್ಚಿಸಿದ್ದಾರೆ. 12ನೇ ಶತಮಾನದಲ್ಲಿ ಬಸವಣ್ಣನರು ಹಾಕಿಕೊಟ್ಟ ಕಾಯಕವೇ ಕೈಲಾಸ ಎಂಬ ತತ್ವವನ್ನು ನಂಬಿಕೊಂಡು ಬದುಕು ನಡೆಸುವ ಗ್ರಾಮ ಮಾರನಬಸರಿ ಎಂದರು.

ಮಾರನಬಸರಿ ಗ್ರಾಮ ಇನ್ನುಮುಂದೆ ಸುಕ್ಷೇತ್ರ ಮಾರನಬಸರಿ ಗ್ರಾಮವಾಗಿ ಗೋಚರವಾಗಲಿದೆ. ಮುಖ್ಯವಾಗಿ ಈಗಿನ ಪೀಠಾಧಿಪತಿಗಳಾದ ಚನ್ನಬಸವ ಶ್ರೀಗಳು ಸಹ ಎಲ್ಲ ಧರ್ಮಗಳ ಜನರೊಂದಿಗೆ ಬೆರೆಯುವ ಮನೋಭಾವ ಹೊಂದಿದ್ದಾರೆ. ಕಾರಣ ಅವರು ಬಸವ ತತ್ವದ ಮೇಲೆ ನಂಬಿಕೆಯನ್ನು ಹೊಂದಿದವರು. ಜೊತೆಗೆ ಮನುಷ್ಯನಲ್ಲಿ ಮಾನವೀಯ ಮೌಲ್ಯಗಳು ಅಡಕವಾಗಿರಬೇಕು ಎಂಬುದನ್ನು ಅರಿತವರು. ಹೀಗಾಗಿ ಸರ್ವಧರ್ಮ ಸಮನ್ವಯ ಪೀಠ ಗ್ರಾಮಕ್ಕೆ ಬೆಳಕನ್ನು ಚೆಲ್ಲಲಿದೆ ಎಂದ ಅವರು, ಐದು ದಿನಗಳ ಕಾಲ ಕಲ್ಯಾಣ ದರ್ಶನ ಪ್ರವಚನ ಅದ್ಧೂರಿಯಾಗಿ ನಡೆದಿದ್ದು, ಶ್ರೀಗಳ ಪುರ ಪ್ರವೇಶಕ್ಕೆ ಮತ್ತಷ್ಟು ಮೆರಗು ನೀಡಿದೆ ಎಂದರು.

ಕೊಪ್ಪದ ಕ್ರಾಸ್ ರಸ್ತೆಯಲ್ಲಿನ ಕಾಳಿಕಾದೇವಿಗೆ ವಿಶೇಷ ಪೂಜೆಯನ್ನು ಸಲ್ಲಿಸಿದ ನಂತರ ಶ್ರೀಗಳ ಪುರ ಪ್ರವೇಶ ಕಾರ್ಯಕ್ರಮ ಆರಂಭಗೊಂಡಿತು.ಸಾವಿರಾರು ಭಕ್ತರ ಸಂಗಮದಲ್ಲಿ ಚನ್ನಬಸ ಶ್ರೀಗಳ ಸಾರೋಟ ಮೆರವಣಿಗೆ ಗ್ರಾಮಕ್ಕೆ ತಲುಪುತ್ತಿದ್ದಂತೆ ಎರಡು ಜೆಸಿಬಿ ಯಂತ್ರಗಳ ಮೂಲಕ ಭಕ್ತರು ಶ್ರೀಗಳಿಗೆ ಪುಷ್ಪಾರ್ಚನೆ ಸಲ್ಲಿಸಿ, ಮನೆಗಳ ಮುಂದೆ ರಂಗೋಲಿ ಹಾಕಿ ಆರತಿ ಬೆಳಗುವ ಮೂಲಕ ಶ್ರೀಗಳನ್ನು ಬರಮಾಡಿಕೊಂಡರು. ಕೆಂಪಿನ ಸಿದ್ದವೃಷಭೇಂದ್ರ ಶ್ರೀಗಳು ಸಾನ್ನಿಧ್ಯ ವಹಿಸಿದ್ದರು. ಕುಂದಗೋಳದ ಬಸವಣ್ಣ ಅಜ್ಜನವರು, ಚಿಕೇನಕೊಪ್ಪದ ಶಾಂತವೀರ ಶರಣರು, ಅಭಿನವ ಪಂಚಾಕ್ಷರ ಶಿವಚಾರ್ಯರು, ಡಾ. ಶಿವಕುಮಾರ ಶ್ರೀಗಳು, ಶ್ರೀ ಗಂಗಾಧರ ದೇವರು ನೇತೃತ್ವ ವಹಿಸಿದ್ದರು.

ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಗ್ರಾಮದ ಮುಖಂಡರು ಸೇರಿದಂತೆ ಸಾವಿರಾರು ಭಕ್ತರು ಪುರ ಪ್ರವೇಶ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಅಡರಕಟ್ಟಿ ಸಹಕಾರ ಸಂಘದ ಆಡಳಿತ ಮಂಡಳಿಗೆ ಪದಾಧಿಕಾರಿಗಳ ಅವಿರೋಧ ಆಯ್ಕೆ

# ಸಹಕಾರಿ ಸಂಸ್ಥೆಗಳು ವೃತ್ತಿಪರತೆಗೆ ಆದ್ಯತೆ ನೀಡಲಿ




> ನಿರ್ದೇಶಕರಾಗಿ ರಾಮಣ್ಣ ಅಡರಕಟ್ಟಿ, ಹಾಲಪ್ಪ ಶಿರಹಟ್ಟಿ, ಗಂಗನಗೌಡ ಪಾಟೀಲ, ಮುತ್ತುರಾಜ ಗಡೆಪ್ಪನವರ, ವಿರುಪಾಕ್ಷಪ್ಪ ಹೂಗಾರ, ಹನ್ಮಂತಪ್ಪ ಜಾಲಿಮರದ. ಶಾರವ್ವ ಭಂಗಿ, ಲತಾ ಫಕ್ಕೀರಸ್ವಾಮಿಮಠ, ಹಸನಸಾಬ ತಾಡಪತ್ರಿ, ದೇವಪ್ಪ ಲಮಾಣಿ ಇವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಅಡರಕಟ್ಟಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿಗೆ ನಡೆದ ಚುನವಣೆಯಲ್ಲಿ ಅಧ್ಯಕ್ಷರಾಗಿ ಮಹಾಂತೇಶ ಬಸಪ್ಪ ಹವಳದ ಮತ್ತು ಉಪಾಧ್ಯಕ್ಷರಾಗಿ ಉಮೇಶ ಯಲ್ಲಪ್ಪ ಚಿಕ್ಕಣ್ಣವರ ಸೇರಿ ನಿರ್ದೇಶಕರುಗಳು ಅವಿರೋಧ ಆಯ್ಕೆಯಾದರು.

ಗ್ರಾಮದ ಹಿರಿಯ ಸಹಕಾರಿಗಳಾದ ಚನ್ನಬಸಪ್ಪ ಹಳೆಮನಿ ಮಾತನಾಡಿ, ಸ್ಪರ್ಧಾತ್ಮಕ ಆರ್ಥಿಕ ಸನ್ನಿವೇಶದಲ್ಲಿ ಸಹಕಾರಿ ಸಂಸ್ಥೆಗಳು ವೃತ್ತಿಪರತೆ, ತಾಂತ್ರಿಕ ಅಳವಡಿಕೆ ಹಾಗೂ ಅನ್ವೇಷಣೆಗಳಿಗೆ ಆದ್ಯತೆ ನೀಡಬೇಕು. ಅಡರಕಟ್ಟಿಯ ಈ ಸಂಘವು 1950ರಲ್ಲಿ ಪ್ರಾರಂಭವಾದಾಗಿ ಇಲ್ಲಿಯವರೆ 75 ವರ್ಷಗಳ ಕಾಲ ಅವಿರೋಧವಾಗಿ ಆಡಳಿತ ಮಂಡಳಿ ಆಯ್ಕೆಯಾಗುತ್ತಾ ಬಂದಿದೆ. ಎಲ್ಲ ಸಹಕಾರ ಸಂಘಗಳು ಚುನಾವಣೆಗೆ ಒತ್ತು ನೀಡದೆ ಗ್ರಾಮದ ಎಲ್ಲರೂ ಅವಿರೋಧ ಆಯ್ಕೆ ಮುಖಾಂತರ ಆಡಳಿತ ಮಂಡಳಿ ರಚಿಸಿಕೊಂಡು ಕಾರ್ಯನಿರ್ವಹಿಸಿದಲ್ಲಿ ಪ್ರತಿಯೊಂದು ಸಂಘಗಳು ನಿರೀಕ್ಷಿಸಿದ ಯಶಸ್ಸು ಗಳಿಸಲು ಸಾಧ್ಯವಿದೆ ಎಂದು ಹೇಳಿದರು.

ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಿಂಗನಗೌಡ ಪ್ರಭುಗೌಡ ಪಾಟೀಲ ಮಾತನಾಡಿ, ಸಂಘವು ರೈತರು, ಮಹಿಳೆಯರು, ಯುವಕರು ಮತ್ತು ಸಣ್ಣ ವ್ಯಾಪಾರಿಗಳಿಗೆ ಅನಕೂಲವಾಗುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಿ ಉತ್ತಮ ಸಂಘ ಎಂದು ರಾಜ್ಯ ಮಟ್ಟದಲ್ಲಿ ಗುರುತಿಸಿಕೊಂಡಿದೆ. ಸತತ 25 ವರ್ಷಗಳಿಂದ ಲಾಭ ಗಳಿಸುತ್ತಾ ಸದಸ್ಯರಿಗೆ ಪ್ರತಿ ವರ್ಷ ಡಿವಿಡಂಡ್ ನೀಡುತ್ತಾ ಸಂಘದ ಲಾಭದಲ್ಲಿ 3.20 ಎಕರೆ ಜಮೀನು ಖರೀದಿಸಿ ಸಾವಯವ ಕೃಷಿಗೆ ಆದ್ಯತೆ ನೀಡುತ್ತಿರುವದಲ್ಲದೆ ಕಾಲಕಾಲಕ್ಕೆ ಸದಸ್ಯರ ಅನುಕೂಲಕ್ಕೆ ಉಚಿತ ಆರೋಗ್ಯ ಶಿಬಿರ ನಡೆಸುತ್ತಾ ಉಳಿದ ಸಂಘಗಳಿಗೆ ಮಾದರಿಯಾಗಿದೆ ಎಂದು ಹೇಳಿದರು.

ಈ ವೇಳೆ ರಾಮಣ್ಣ ಚಿಕ್ಕಣ್ಣವರ, ಮಹಾದೇವಪ್ಪ ಹವಳದ, ವೀರಭದ್ರಪ್ಪ ಶಿಗ್ಲಿ, ಗಂಗನಗೌಡ ಪಾಟೀಲ, ಶಿದ್ದೇಶ್ವರ ಹವಳದ, ಮರಬಸಪ್ಪ ಚಿಕ್ಕಣ್ಣವರ, ಯಲ್ಲಪ್ಪ ರೊಳ್ಳಿ, ಕಲ್ಲಪ್ಪ ಗಂಗಣ್ಣವರ, ಕಲ್ಲಪ್ಪ ಮತ್ತಿಕಟ್ಟಿ, ನಿಂಗಪ್ಪ ಪ್ಯಾಟಿ ಸೇರಿದಂತೆ ಹರದಗಟ್ಟಿ, ಕೊಂಡಿಕೊಪ್ಪ ಗ್ರಾಮಗಳ ಹಿರಿಯರು ಇದ್ದರು. ಚುನಾವಣಾಧಿಕಾರಿಗಳಾಗಿ ಬಸವರಾಜ ನಿಡಗುಂದಿ ಕಾರ್ಯನಿರ್ವಹಿಸಿದರು.

# ವ್ಯಸನಮುಕ್ತ ಸಮಾಜ ನಿರ್ಮಿಸೋಣ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ವಿದ್ಯಾರ್ಥಿ ಸಮುದಾಯವನ್ನು ದಾರಿ ತಪ್ಪಿಸುತ್ತಿರುವ ಮಾದಕ ದ್ರವ್ಯ ವ್ಯಸನ ಯುವ ಜನಾಂಗದ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಹಾಳು ಮಾಡಿದೆ. ಯುವ ಜನಾಂಗ ಮಾದಕ ದ್ರವ್ಯಗಳ ವ್ಯಸನಕ್ಕೆ ಬಲಿಯಾಗುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಆದ್ದರಿಂದ ವ್ಯಸನಮುಕ್ತ ಆರೋಗ್ಯಕರ ಸಮಾಜ ನಿರ್ಮಾಣ ಮಾಡುವುದು ಪೊಲೀಸ್ ಇಲಾಖೆಯ ಉದ್ದೇಶವಾಗಿದೆ ಎಂದು ಶಿರಹಟ್ಟಿ ಪಿಎಸ್‌ಐ ಈರಪ್ಪ ರಿತ್ತಿ ಹೇಳಿದರು. ಅವರು ಶಿರಹಟ್ಟಿಯ ಎಫ್.ಎಮ್. ಡಬಾಲಿ ಪದವಿಪೂರ್ವ ಕಾಲೇಜಿನಲ್ಲಿ ಗದಗ ಜಿಲ್ಲಾ ಪೊಲೀಸ್ ಮತ್ತು ಶಿರಹಟ್ಟಿ ಪೊಲೀಸ್ ಠಾಣೆ ವತಿಯಿಂದ ಹಮ್ಮಿಕೊಂಡಿದ್ದ ಅಪರಾಧ ತಡೆ ಮಾಸಾಚರಣೆ ಮತ್ತು ಮಾದಕ ವ್ಯಸನ ಮುಕ್ತ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.




ಶರೀರದ ನರಮಂಡಲದ ಮೇಲೆ ಈ ಮಾದಕ ವ್ಯಸನಗಳಿಂದ ವ್ಯತಿರಿಕ್ತ ಪರಿಣಾಮ ಉಂಟಾಗಿ ವ್ಯಕ್ತಿಯು ಸಾವಿನ ದವಡೆಗೆ ದೂಡಲ್ಪಡುತ್ತಾನೆ. ವ್ಯಸನ ಮುಕ್ತ ಸಮಾಜ ನಮ್ಮೆಲ್ಲರ ಸಂಕಲ್ಪವಾಗಬೇಕು ಮತ್ತು ಪೊಲೀಸ್ ಪೌರರ ಸಹಭಾಗಿತ್ವ ಅಪರಾಧದ ಮೂಲ ದಮನ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಎಂ.ಸಿ. ಭಜಂತ್ರಿ ಮಾತನಾಡಿ, ಮಾದಕ ದ್ರವ್ಯ ವ್ಯಸನ ಯುವ ಜನಾಂಗಕ್ಕೆ ಬಹಳಷ್ಟು ಅಪಾಯಕಾರಿಯಾಗಿದ್ದು, ಅವುಗಳಿಂದ ವಿದ್ಯಾರ್ಥಿಗಳು ದೂರವಿರಬೇಕು ಮತ್ತು ಸೈಬರ್ ಅಪರಾಧಗಳ ಬಗ್ಗೆ ಅರಿವು ಹೊಂದುವುದರಿಂದ ಮಕ್ಕಳು, ಮಹಿಳೆಯರು ಹಾಗೂ ಹಿರಿಯ ನಾಗರಿಕರು ಸುರಕ್ಷಿತವಾಗಿ ಇಂಟರ್‌ನೆಟ್ ಬಳಕೆ ಮಾಡಬಹುದು ಎಂದರು.

ಈ ಸಂದರ್ಭದಲ್ಲಿ ಮಂಜುನಾಥ ಚವಡಿ, ಎನ್. ಹನುಮರೆಡ್ಡಿ, ಪಿ.ಎನ್. ಕುಲಕರ್ಣಿ, ಎಂ.ಎಂ. ನದಾಫ್, ಎಫ್.ಎ. ಬಾಬುಖಾನವರ, ಪಿ.ವಿ. ಹೊಸೂರ, ನೀಲಕಾಂತ ಕಂಕನವಾಡ, ಸೋಮಶೇಖರ ರಾಮಗೇರಿ, ಮಲ್ಲಿಕಾರ್ಜುನ ವಡ್ಡರ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಇಂದು ವಿದ್ಯುತ್ ವ್ಯತ್ಯಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಡಿ. 30ರಂದು 110 ಕೆವ್ಹಿ ಸಂಭಾಪೂರ ರೋಡ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಸಂಭಾಪೂರ ರೋಡ್ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನಗರ, ನಿರಂತರಜ್ಯೋತಿ, ಕೃಷಿ ನೀರಾವರಿ ಪಂಪ್‌ಸೆಟ್‌ಗಳ ಮಾರ್ಗಗಳು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿವೇಕಾನಂದ ನಗರ, ಹೊಸ ಬಸ್‌ಸ್ಟ್ಯಾಂಡ್, ಪಂಚಾಕ್ಷರಿ ನಗರ, ರಾಜೀವಗಾಂಧಿ ನಗರ, ಬುರುಬುರೆ ಪ್ಲಾಟ್, ಆನಂದಾಶ್ರಮ ರಸ್ತೆ, ಜೆ.ಟಿ. ಕಾಲೇಜ್ ರಸ್ತೆ, ಹಾತಲಗೇರಿ ಎನ.ಜೆ.ವೈ ಹಾಗೂ ಇ.ಐ.ಪಿ ಫೀಡರ್‌ಗಳ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕೆಂದು ಹೆಸ್ಕಾಂ ಪ್ರಕಟಣೆ ವಿನಂತಿಸಿದೆ.


# ಮಕ್ಕಳ ಪ್ರತಿಭೆಯನ್ನು ಬಾಲ್ಯದಲ್ಲೇ ಗುರುತಿಸಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಕ್ಕಳಲ್ಲಿ ಸುಪ್ತವಾಗಿರುವ ಸಂಗೀತ, ನೃತ್ಯ, ಚಿತ್ರಕಲೆ, ಕ್ರೀಡೆ ಹೀಗೆ ಯಾವುದೇ ವಿಶೇಷ ಪ್ರತಿಭೆಗಳನ್ನು ಬಾಲ್ಯದಲ್ಲಿಯೇ ಗುರುತಿಸಿ ಅದಕ್ಕೆ ಸಂಸ್ಕಾರ, ಶಿಸ್ತು, ಸಂಯಮದ ನೀರೆರೆದು ಪ್ರೋತ್ಸಾಹಿಸಬೇಕು ಎಂದು ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್‌ನ ಅಧ್ಯಕ್ಷ ಕೆ.ಎ. ಬಳಿಗೇರ ಹೇಳಿದರು.

ಅವರು ಪಟ್ಟಣದ ರಂಭಾಪುರಿ ಜ.ವೀರಗಂಗಾಧರ ಸಮುದಾಯ ಭವನದಲ್ಲಿ ಕಲಾ ವೈಭವ ಸಾಂಸ್ಕೃತಿಕ ವಿವಿಧೋದ್ದೇಶಗಳ ಸಂಸ್ಥೆಯಿಂದ ನಡೆದ ನಟರಾಜ ನರ್ತನ ಭರತನಾಟ್ಯ ಕಾರ್ಯಕ್ರಮ ಉದ್ಘಾಟಸಿ ಮಾತನಾಡಿದರು.

ಭರತ ನಾಟ್ಯ ಭರತನಾಟ್ಯ ದೇಶದ ಪ್ರಾಚೀನ ಕಲೆ, ಸಾಹಿತ್ಯ, ಸಂಗೀತ, ಸಂಸ್ಕೃತಿ, ಪರಂಪರೆ ಬಿಂಬಿಸುವ ಭಾರತೀಯ ಸಾಂಪ್ರದಾಯಿಕ ಶ್ರೇಷ್ಠ ನೃತ್ಯ ಕಲೆಯಾಗಿದೆ. ಮಕ್ಕಳಲ್ಲಿ ಸಂಸ್ಕಾರ, ಸಂಸ್ಕೃತಿ, ದೇವರು, ಧರ್ಮ,



ಗುರು–ಹಿರಿಯರಲ್ಲಿ ವಿಧೇಯತೆ ಜತೆಗೆ ಮಾನಸಿಕ ದೈಹಿಕ ಆರೋಗ್ಯವನ್ನುಂಟುಮಾಡುತ್ತದೆ. ದೇಶದ ಸಂಪತ್ತಾದ ಮಕ್ಕಳಲ್ಲಿ ನಮ್ಮ ಸಾಂಪ್ರದಾಯಿಕ, ಕಲೆ ಉಳಿಸಿ–ಬೆಳೆಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳ ಕಾರ್ಯ ನಿರಂತರವಾಗಿರಲಿ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಾಹಿತಿ ಲಲಿತಕ್ಕ ಕೆರಿಮನಿ, ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಸುಧಾ ಹುಚ್ಚಣ್ಣವರ ಮಾತನಾಡಿ, ಪ್ರಸ್ತುತ ಟಿ.ವಿ. ಕಂಪ್ಯೂಟರ್, ಮೊಬೈಲ್ ಇತರೇ ತಂತ್ರಜ್ಞಾನದ ಪ್ರಭಾವದ ನಡುವೆಯೂ ದೇಶದ ಸಾಂಸ್ಕೃತಿಕ ಶ್ರೀಮಂತಿಕೆಯ ನೃತ್ಯಕಲೆ, ಸಂಗೀತ, ಸಾಹಿತ್ಯ, ಹಬ್ಬ, ಉತ್ಸವ, ಆಚರಣೆಗಳಲ್ಲಿ ಮಕ್ಕಳನು ತೊಡಗಿಸಿ ಉಳಿಸಿ–ಬೆಳೆಸಿ–ಪ್ರೋತ್ಸಾಹಿಸುವ ಗುರುತರ ಜವಾಬ್ದಾರಿ ಎಲ್ಲರದ್ದಾಗಿದೆ ಎಂದರು.

ಕಲಾ ವೈಭವ ಸಂಸ್ಥೆಯ ಮುಖ್ಯಸ್ಥೆ ಭವ್ಯಾ ಕತ್ತಿ ಪ್ರಾಸ್ತಾವಿಕ ನುಡಿದರು. ಈ ವೇಳೆ ಸಿದ್ದಲಿಂಗಯ್ಯಸ್ವಾಮಿ ಹಿರೇಮಠ, ಗದಗನ ವಿ. ರಾಘವಿ ಜೋತಿಶ್ರೀ ಸೇರಿ ಪಾಲಕರು ಪಾಲ್ಗೊಂಡಿದ್ದರು. ಬಳಿಕ ಸಂಸ್ಥೆಯ ಭರತನಾಟ್ಯ ವಿದ್ಯಾರ್ಥಿಗಳಿಂದ ನೃತ್ಯ ವೈಭವ ಕಾರ್ಯಕ್ರಮ ನೆರವೇರಿತು.

# ಅಸ್ಪೃಶ್ಯತೆಯ ಮಾಹಿತಿ ನೀಡಿದರೆ ಕ್ರಮ ವಹಿಸುತ್ತೇವೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಜನರ ಸಮಸ್ಯೆಗಳನ್ನು ಕಾನೂನಿನಡಿಯಲ್ಲಿ ಶೀಘ್ರಗತಿಯಲ್ಲಿ ಬಗೆಹರಿಸುತ್ತೇವೆ ಎಂದು ಸಿಪಿಐ ಬಿ.ವಿ. ನ್ಯಾಮಗೌಡ ಹೇಳಿದರು.

ಅವರು ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ನಡೆದ ಪರಿಶಿಷ್ಟ ಜಾತಿ–ಪರಿಶಿಷ್ಟ ಪಂಗಡಗಳ ಜನರ ಕುಂದುಕೊರತೆ ಸಭೆಯಲ್ಲಿ ಮಾತನಾಡಿದರು.

ತಾಲೂಕಿನಲ್ಲಿ ಎಲ್ಲಿಯಾದರೂ ಅಸ್ಪೃಶ್ಯತೆ ಇರುವ ಮಾಹಿತಿ ಇದ್ದರೆ ಅದನ್ನು ಠಾಣೆಗೆ ತಿಳಿಸಿದಲ್ಲಿ, ಪೊಲೀಸ್ ಇಲಾಖೆ ಜನರೊಂದಿಗೆ ಬೆರೆತು ಸಮಸ್ಯೆಗಳನ್ನು ಬಗೆಹರಿಸುತ್ತೇವೆ. ಇತ್ತೀಚೆಗೆ ರೈತ ಹೋರಾಟ ವೇದಿಕೆಯಲ್ಲಿ ಡಾ. ಬಿ.ಆರ್ ಅಂಬೇಡ್ಕರ್ ಹಾಗೂ ಮಹಾತ್ಮ ಗಾಂಧೀಜಿ ಅವರಿಗೆ ಅವಮಾನವಾದ ಪ್ರಕರಣ ಜಿಲ್ಲಾ ಡಿಸಿಆರ್‌ಇ ಪೊಲೀಸ್‌ನಲ್ಲಿ ದೂರು




ದಾಖಲಾಗಿದೆ. ಸ್ಥಳೀಯ ಪೊಲೀಸ್ ಇಲಾಖೆಯ ಜೊತೆಗೂಡಿ ಪ್ರಕರಣದ ಗಂಭೀರತೆ ಬಗ್ಗೆ ಮೇಲಧಿಕಾರಿಗಳ ಗಮನಕ್ಕೆ ತಂದು ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು.

ಸಭೆಯಲ್ಲಿ ಮಾತನಾಡಿದ ದಲಿತ ಮುಖಂಡರಾದ ಸುರೇಶ ನಂದೆಣ್ಣವರ, ಫಕ್ಕೀರೇಶ ಮ್ಯಾಟಣ್ಣವರ ಹಾಗೂ ಕೋಟೆಪ್ಪ ವರ್ದಿ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಮಹಾತ್ಮ ಗಾಂಧೀಜಿ ಅವರಿಗೆ ಅವಮಾನ ಮಾಡಿದವರ ಮೇಲೆ ಕ್ರಮ ಕೈಗೊಳ್ಳುವಂತೆ ದೂರು ನೀಡಿದರೂ ಪೊಲೀಸ್ ಇಲಾಖೆ ಮೀನ–ಮೇಷ ಮಾಡುತ್ತಿದೆ. ಇದರ ಹಿಂದೆ ಕಾಣದ ಕೈಗಳು ಕೆಲಸ ಮಾಡುತ್ತಿವೆ. ತಪ್ಪಿತಸ್ಥರ ಮೇಲೆ 5 ದಿನಗಳೊಳಗೆ ಕ್ರಮ ಕೈಗೊಳ್ಳದಿದ್ದರೆ ಲಕ್ಷ್ಮೇಶ್ವರ, ಶಿರಹಟ್ಟಿ, ಮುಂಡರಗಿ ತಾಲೂಕುಗಳಲ್ಲಿ ದಲಿತ ಹಾಗೂ ಅಂಬೇಡ್ಕರ್ ಅಭಿಮಾನಿಗಳಿಂದ ಹೋರಾಟ ಹಮ್ಮಿಕೊಳ್ಳುತ್ತೇವೆ ಎಂದು ಹೇಳಿದರು.

ಈ ವೇಳೆ ಪಿಎಸ್‌ಐ ನಾಗರಾಜ ಗಡಾದ, ಅಪರಾಧ ವಿಭಾಗದ ಪಿಎಸ್‌ಐ ಟಿ.ಕೆ. ರಾಠೋಡ, ಹಿರಿಯರಾದ ಜಯಕ್ಕ ಕಳ್ಳಿ, ಮಲ್ಲೇಶ ವಡ್ಡರ, ಬಸವಣೆಪ್ಪ ನಂದೆಣ್ಣವರ, ಸದಾನಂದ ನಂದೆಣ್ಣವರ, ಮಂಜುನಾಥ ಗಜಾಕೋಶ, ಪ್ರಮೋದ ಕರಾಟೆ, ಸತೀಶ ನಾರಾಯಣಕರ, ಮಂಜುನಾಥ ಶಿರಹಟ್ಟಿ, ರಾಜಶೇಖರ ಮೆಲ್ಮುರಿ, ಸಂತೋಷ ಲಮಾಣಿ, ಅನಿಲ ನಂದೆಣ್ಣವರ, ಮಲ್ಲೇಶ ಮಣ್ಣಮ್ಮನವರ ಮುಂತಾದವರಿದ್ದರು. ಪ್ರಕಾಶ ಮ್ಯಾಗೇರಿ ನಿರೂಪಿಸಿದರು.


**ಪುರಸಭೆ ಕಾರ್ಯಾಲಯ ರೋಣ–582209. ಜಿ: ಗದಗ.**
ದೂರವಾಣಿ : 08381-267234
E-mail: itstaff_ulb_ron@yahoo.in Website: www.ronatown.mrc.gov.in
ಕ್ರ.ಸಂ/ಪುಸರೋ/15th NMPC/ SFC/ಕು.ನಿ.ಸ.ಪ/ವಹಿ/2025–26 ದಿನಾಂಕ : 29–12–2025

**ಅಲ್ಪಾವಧಿ ಟೆಂಡರ್ ಪ್ರಕಟಣೆ (ಕೆ.ಪಿ.ಪಿ.ಪಿ. ಮುಖಾಂತರ)**

ರೋಣ ಪುರಸಭೆಯಿಂದ ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಕರ್ನಾಟಕ ಪಾರದರ್ಶಕತೆ ಅಧಿನಿಯಮ 2000 ರ ಪ್ರಕಾರ "ಕೆ.ಪಿ.ಪಿ.ಪಿ. ಪೋರ್ಟಲ್" ಪದ್ಧತಿಯಲ್ಲಿ ಸನ್ 2021–22 ನೇ ಸಾಲಿನ 15ನೇ ಹಣಕಾಸು(NMPC), ಸನ್ 2019–20 ನೇ ಸಾಲಿನ ಎಸ್.ಎಫ್.ಸಿ, ಸನ್ 2025–26 ಎಸ್.ಎಫ್.ಸಿ. ಮುಕ್ತನಿಧಿ ಹಾಗೂ ಸನ್ 2020–21 ಹಾಗೂ ಸನ್ 2023–24 ನೇ ಸಾಲಿನ ಎಸ್.ಎಫ್.ಸಿ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಉಳಿಕೆಯಾದ ಅನುದಾನದಡಿ ಮಂಜೂರಾದ ಈ ಕೆಳಗಿನ ಕಾಮಗಾರಿಗಳ ನಿರ್ವಹಣೆ/ಪೂರೈಕೆಗಾಗಿ ಕೆ.ಡಬ್ಲ್ಯೂ 1 TENDER ದಸ್ತಾವೇಜಿನಲ್ಲಿ "ಕೆ.ಪಿ.ಪಿ.ಪಿ." ನೊಂದಾಯಿತ ಅರ್ಹ ಗುತ್ತಿಗೆದಾರರು/ಪೂರೈಕೆದಾರರಿಗೆ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್‌ನ್ನು "ಕೆ.ಪಿ.ಪಿ.ಪಿ." ವೆಬ್‌ಸೈಟ್ www.ronatown.mrc.gov.in/Tenders ಅಥವಾ http://kppp.karnataka.gov.in ಮೂಲಕ ಷರತ್ತುಗಳಂತೆ ಟೆಂಡರ್‌ನಲ್ಲಿ ಭಾಗವಹಿಸಲು ಪ್ರಚಾರ ಪಡಿಸಲಾಗಿದೆ.

| ಅ. ನಂ. | ಇಂಡೆಂಟ್ ನಂ | ಅಂದಾಜು ಮೊತ್ತ (ಲಕ್ಷಗಳಲ್ಲಿ) |
|---|---|---|
| 1 | DMA/2025-26/OW/WORK_INDENT53274 | 3.00 |
| 2 | DMA/2025-26/OW/WORK_INDENT51027 | 1.85 |
| 3 | DMA/2025-26/WS/WORK_INDENT53273 | 1.32 |
| | GOODS WORK | |
| 4 | DMA/2025-26/IND5749 | 5.27 |
| | TOTAL | 11.44 |

**ಸೂಚನೆ :** ಸದರ ಟೆಂಡರ್‌ಗಳಿಗೆ ಸಂಬಂಧಿಸಿದಂತೆ ಯಾವುದೇ ತಿದ್ದುಪಡಿಗಳಿದ್ದಲ್ಲಿ ಕೆ.ಪಿ.ಪಿ.ಪಿ ಪೋರ್ಟಲ್‌ನಲ್ಲಿ ಮಾತ್ರ ಪ್ರಕಟಣೆ ಮಾಡಲಾಗುವುದು.
**ನಿರ್ಧಾರಿತ ದಿನಾಂಕಗಳ ವಿವರ : (1) ದಿನಾಂಕ : 06–01–2026 ಸಾಯಂಕಾಲ 5–30** ಗಂಟೆಯವರೆಗೆ ಇ–ಪ್ರೊಕ್ಯೂರ್‌ಮೆಂಟ್‌ನಲ್ಲಿ ಟೆಂಡರ್ ಫಾರ್ಮಗಳಿಗೆ ಅರ್ಜಿ ಸಲ್ಲಿಸಬಹುದು. (2) ತಾಂತ್ರಿಕ ಬಿಡ್ ತೆರೆಯುವ **ದಿನಾಂಕ : 08–01–2026**

ಸಹಿ/– ಮುಖ್ಯಾಧಿಕಾರಿಗಳು ಪುರಸಭೆ ರೋಣ
ಸಹಿ/– ಆಡಳಿತಾಧಿಕಾರಿಗಳು ಪುರಸಭೆ ರೋಣ
ವಾ.ಸಾ.ಇ/ಗದಗ/482/ದೇಶಪಾಂಡೆಪಬ್ಲಿಸಿಟಿ/2025–26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka